# ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರ ಕಛೇರಿ, ಬೆಳಗಾವಿ

ಅಧಿಸೂಚನೆ ಸಂಖ್ಯೆಃ ಬೆಜಿನ್ಯಾ/ಆಡಳಿತ/ನೇಮಕಾತಿ/1/2024,

ದಿನಾಂಕಃ 27.02.2024

*****

ಆನ್‌ಲೈನ್ ಮುಖಾಂತರ ಅರ್ಜಿಯನ್ನು ಸಲ್ಲಿಸಲು ಕೊನೆಯ ದಿನಾಂಕಃ **14.04.2024.**

ಆನ್‌ಲೈನ್ ಮುಖಾಂತರ ಶುಲ್ಕವನ್ನು ಪಾವತಿಸುವ ಕೊನೆಯ ದಿನಾಂಕಃ **15.04.2024.**

*****

ವಿಷಯಃ ಬೆಳಗಾವಿ ಜಿಲ್ಲಾ ನ್ಯಾಯಾಂಗ ಘಟಕದಲ್ಲಿ ಖಾಲಿ ಇರುವ ಶೀಘ್ರಲಿಪಿಗಾರರು (Stenographer-Grade-III), ಬೆರಳಚ್ಚುಗಾರರು(Typist), ಆದೇಶಜಾರಿಕಾರರು (Process-Server) ಮತ್ತು ಸಿಪಾಯಿ/ಜವಾನ (Peon) ಹುದ್ದೆಗಳಿಗೆ ಅಭ್ಯರ್ಥಿಗಳನ್ನು ನೇರ ನೇಮಕಾತಿಯ ಮೂಲಕ ಆಯ್ಕೆ ಮಾಡುವ ಬಗ್ಗೆ.

ಉಲ್ಲೇಖಃ

1) ಗೌರವಾನ್ವಿತ ಕರ್ನಾಟಕ ಉಚ್ಚ ನ್ಯಾಯಾಲಯದ ಪತ್ರ ಸಂಖ್ಯೆಃ ಡಿ.ಎ.ಜಿ- **II(ಎಲ್.ಸಿ.ಎ II)-128/2012** ದಿನಾಂಕಃ **11.09.2023.**

2) ಈ ನ್ಯಾಯಾಲಯದ ಅಧಿಸೂಚನೆ ಸಂಖ್ಯೆಃ ಬೆಜಿನ್ಯಾ/ಆಡಳಿತ/ನೇಮಕಾತಿ/ **01/2021** ದಿನಾಂಕಃ **23.02.2021.**

3) ಈ ನ್ಯಾಯಾಲಯದ ಅಧಿಸೂಚನೆ ಸಂಖ್ಯೆಃ ಬೆಜಿನ್ಯಾ/ಆಡಳಿತ/ನೇಮಕಾತಿ/ **01/2022** ದಿನಾಂಕಃ **07.11.2022.**

4) ಈ ನ್ಯಾಯಾಲಯದ ಅಧಿಸೂಚನೆ ಸಂಖ್ಯೆಃ ಬೆಜಿನ್ಯಾ/ಆಡಳಿತ/ನೇಮಕಾತಿ/ **01/2023** ದಿನಾಂಕಃ **02.02.2023.**

*****

ಮೇಲ್ಕಂಡ ಉಲ್ಲೇಖಿತ(1)ರ ಗೌರವಾನ್ವಿತ ಕರ್ನಾಟಕ ಉಚ್ಚ ನ್ಯಾಯಾಲಯ, ಬೆಂಗಳೂರು ರವರ ಪತ್ರ ಹಾಗೂ ಸರ್ಕಾರಿ ಆದೇಶದಂತೆ, ಈ ಅಧಿಸೂಚನೆಯಡಿಯಲ್ಲಿ, ಬೆಳಗಾವಿ ಜಿಲ್ಲಾ ನ್ಯಾಯಾಂಗ ಘಟಕದಲ್ಲಿ ಖಾಲಿ ಇರುವ ಶೀಘ್ರಲಿಪಿಗಾರರು (Stenographer-Grade-III)-05, ಬೆರಳಚ್ಚುಗಾರರು(Typist)-01, ಆದೇಶಜಾರಿಕಾರರು(Process-Server)-02 ಮತ್ತು ಸಿಪಾಯಿ/ಜವಾನ(Peon)-33 ಹುದ್ದೆಗಳನ್ನು ನೇರ ನೇಮಕಾತಿಯ ಮೂಲಕ ಭರ್ತಿ ಮಾಡುವ ಸಲುವಾಗಿ ಅರ್ಹ ಅಭ್ಯರ್ಥಿಗಳಿಂದ ಆನ್‌ಲೈನ್ ಮುಖಾಂತರ ಅರ್ಜಿಗಳನ್ನು ಆಹ್ವಾನಿಸಲಾಗಿದೆ.

ಅರ್ಹ ಅಭ್ಯರ್ಥಿಗಳು ಅರ್ಜಿಗಳನ್ನು ಬೆಳಗಾವಿ ಜಿಲ್ಲಾ ನ್ಯಾಯಾಲಯದ ವೆಬ್-ಸೈಟ್ https://belagavi.dcourts.gov.in/notice-category/recruitments/ ನಲ್ಲಿ ನೀಡಲಾದ ಲಿಂಕ್ ಮೂಲಕ ಆನ್‌ಲೈನ್‌ನಲ್ಲಿ **ದಿನಾಂಕಃ 14.03.2024** ರಿಂದ **ದಿನಾಂಕಃ 14.04.2024 ರ ರಾತ್ರಿ 11.59 ರವರೆಗೆ** ಮಾತ್ರ ಸಲ್ಲಿತಕ್ಕದ್ದು ಮತ್ತು ಪೂರ್ಣ ಅರ್ಜಿಯನ್ನು ಸಲ್ಲಿಸಿದ ಅಭ್ಯರ್ಥಿಗಳಿಗೆ ಅರ್ಜಿ ಶುಲ್ಕವನ್ನು ಪಾವತಿಸಲು **ಕೊನೆಯ ದಿನಾಂಕಃ 15.04.2024** ಆಗಿರುತ್ತದೆ. ಆನ್‌ಲೈನ್ ಹೊರತುಪಡಿಸಿ ಖುದ್ದಾಗಿ, ಅಂಚೆ ಮೂಲಕ ಅಥವಾ ಬೇರೆ ಯಾವುದೇ ರೀತಿಯಲ್ಲಿ ಸಲ್ಲಿಸುವ ಅರ್ಜಿಗಳನ್ನು ಪರಿಗಣಿಸಲಾಗುವುದಿಲ್ಲ.

**ವಿಶೇಷ ಸೂಚನೆ:**

01) ಅಭ್ಯರ್ಥಿಗಳು ಅರ್ಜಿಯಲ್ಲಿ ಚಾಲ್ತಿಯಲ್ಲಿರುವ ತಮ್ಮ ದೂರವಾಣಿ ಸಂಖ್ಯೆ ಹಾಗೂ ಇ-ಮೇಲ್ ವಿಳಾಸವನ್ನು ಕಡ್ಡಾಯವಾಗಿ ನಮೂದಿಸವುದು.

02) ಅಭ್ಯರ್ಥಿಗಳು ಆನ್‌ಲೈನ್ ಅರ್ಜಿ ಸಲ್ಲಿಸುವ ಸಂದರ್ಭದಲ್ಲಿ ಯಾವುದಾದರೂ ತಾಂತ್ರಿಕ ತೊಂದರೆಗಳು ಕಂಡು ಬಂದರೆ ಈ ಕಛೇರಿಯ ಈ ಕೆಳಕಂಡ ಇಮೇಲ್ ವಿಳಾಸಕ್ಕೆ ತಮ್ಮ ದೂರುಗಳನ್ನು ಸಲ್ಲಿಸಿ ಬಗೆಹರಿಸಿಕೊಳ್ಳುವುದು.
recruitment.pdjbgm@gmail.com

## I) ಶೀಘ್ರಲಿಪಿಗಾರರು ಗ್ರೇಡ್-III (Stenographers-Grade III)

I) ಹುದ್ದೆಗಳ ಸಂಖ್ಯೆ : 05

II) ವೇತನ ಶ್ರೇಣಿ : 27650-650-29600-750-32600-850-36000-950-39800-1100-46400-1250-52650 ಹಾಗೂ ಲಭ್ಯವಿರುವ ಇತರೆ ಭತ್ಯೆಗಳು

:: **ಹುದ್ದೆಗಳ ವರ್ಗೀಕರಣ** ::

| ವರ್ಗ | ಇತರೆ | ಮಹಿಳಾ ಅಭ್ಯರ್ಥಿ | ಒಟ್ಟು |
|---|---|---|---|
| ಸಾಮಾನ್ಯ | 1 | 1 | 02 |
| ಪರಿಶಿಷ್ಟ ಜಾತಿ | 1 | -- | 01 |
| ಪರಿಶಿಷ್ಟ ಪಂಗಡ | 1 | -- | 01 |
| ಪ್ರವರ್ಗ - I | 1 | -- | 01 |
| **ಒಟ್ಟು** | **04** | **01** | **05** |

:: **ಶೈಕ್ಷಣಿಕ ವಿದ್ಯಾರ್ಹತೆ** ::

1) ಅರ್ಜಿ ಸಲ್ಲಿಸಲು ನಿಗದಿಪಡಿಸಿರುವ ಕೊನೆಯ ದಿನಾಂಕದ ಒಳಗಾಗಿ ಅಭ್ಯರ್ಥಿಯು ಕರ್ನಾಟಕ ಪದವಿ ಪೂರ್ವ ಶಿಕ್ಷಣ ಇಲಾಖೆ ನಡೆಸುವ ದ್ವಿತೀಯ ಪಿ.ಯು.ಸಿ ಅಥವಾ ಕರ್ನಾಟಕ ತಾಂತ್ರಿಕ ಪರೀಕ್ಷಾ ಮಂಡಳಿಯು ನಡೆಸುವ ಡಿಪ್ಲೋಮಾ ಇನ್ ಕಮರ್ಷಿಯಲ್ ಪ್ರಾಕ್ಟಿಸ್ ಅಥವಾ ತತ್ಸಮಾನ ವಿದ್ಯಾರ್ಹತೆಯನ್ನು ಹೊಂದಿರಬೇಕು.

2) ಅರ್ಜಿ ಸಲ್ಲಿಸಲು ನಿಗದಿಪಡಿಸಿರುವ ಕೊನೆಯ ದಿನಾಂಕದ ಒಳಗಾಗಿ ಅಭ್ಯರ್ಥಿಯು ಕರ್ನಾಟಕ ಸಾರ್ವಜನಿಕ ಶಿಕ್ಷಣ ಇಲಾಖೆ ವತಿಯಿಂದ ನಡೆಸುವ ಕನ್ನಡ ಹಾಗೂ ಆಂಗ್ಲ ಭಾಷೆಯ ಶೀಘ್ರಲಿಪಿಯಲ್ಲಿ ಪ್ರೌಢದರ್ಜೆ(ಸೀನಿಯರ್ ಗ್ರೇಡ್) ಮತ್ತು ಕನ್ನಡ ಹಾಗೂ ಆಂಗ್ಲ ಭಾಷೆಯ ಬೆರಳಚ್ಚು ಪ್ರೌಢದರ್ಜೆ(ಸೀನಿಯರ್ ಗ್ರೇಡ್) ಅಥವಾ ಕರ್ನಾಟಕ ತಾಂತ್ರಿಕ ಪರೀಕ್ಷಾ ಮಂಡಳಿಯು ನಡೆಸುವ ಡಿಪ್ಲೋಮಾ ಇನ್ ಕಮರ್ಷಿಯಲ್ ಪ್ರಾಕ್ಟಿಸ್ ಪದವಿಯೊಂದಿಗೆ ಕನ್ನಡ ಮತ್ತು ಆಂಗ್ಲ ಭಾಷೆಗಳ ಶೀಘ್ರಲಿಪಿ ಹಾಗೂ ಬೆರಳಚ್ಚು ವಿಷಯಗಳನ್ನು ಐಚ್ಛಿಕ ವಿಷಯವಾಗಿ ಅಭ್ಯಸಿಸಿ ಉತ್ತೀರ್ಣರಾಗಿರಬೇಕು ಅಥವಾ ತತ್ಸಮಾನ ವಿದ್ಯಾರ್ಹತೆ ಹೊಂದಿರಬೇಕು.

:: **<u>ಅರ್ಹತಾ ಪರೀಕ್ಷೆ</u>** ::

1) ಅಭ್ಯರ್ಥಿಗಳಿಗೆ ಕನ್ನಡ ಮತ್ತು ಆಂಗ್ಲ ಭಾಷೆಗಳಲ್ಲಿ ಪ್ರತಿ ನಿಮಿಷಕ್ಕೆ 120 ಪದಗಳ ವೇಗದಂತೆ 5 ನಿಮಿಷಗಳ ಉಕ್ತಲೇಖನ ನೀಡಿ ನಂತರ 45 ನಿಮಿಷಗಳ ಅವಧಿಯಲ್ಲಿ ಬೆರಳಚ್ಚು ಯಂತ್ರದಲ್ಲಿ ಅಥವಾ ಗಣಕ ಯಂತ್ರದಲ್ಲಿ ಲಿಪ್ಯಂತರ ಮಾಡಿಸುವ ಮೂಲಕ ಅರ್ಹತಾ ಪರೀಕ್ಷೆಯನ್ನು ನಡೆಸಲಾಗುವುದು.

:: **<u>ಆಯ್ಕೆ ವಿಧಾನ</u>**::

1) ಕರ್ನಾಟಕ ನಾಗರೀಕ ಸೇವಾ (ಸಾಮಾನ್ಯ ನೇಮಕಾತಿ) ನಿಯಮ ಹಾಗೂ ಅಧೀನ ನ್ಯಾಯಾಲಯಗಳ (ಲಿಪಿಕ ಹಾಗೂ ಇತರೆ ಹುದ್ದೆಗಳು) (ನೇಮಕಾತಿ) ನಿಯಮಗಳು 1982 ಮತ್ತು ತಿದ್ದುಪಡಿ ನಿಯಮಗಳು 2007 ಹಾಗೂ 2021 ರ ಅನ್ವಯ ನೇರ ನೇಮಕಾತಿಯನ್ನು ನಡೆಸಲಾಗುವುದು.
2) ಪ್ರತಿ ಅರ್ಹತಾ ಪರೀಕ್ಷೆಯು ಗರಿಷ್ಠ 100 ಅಂಕಗಳನ್ನು ಒಳಗೊಂಡಿದ್ದು ಅವುಗಳಲ್ಲಿ ತೇರ್ಗಡೆಯಾಗಲು ಕನಿಷ್ಠ 50 ಅಂಕಗಳನ್ನು ಅಭ್ಯರ್ಥಿಗಳು ಪಡೆಯಬೇಕಾಗಿರುತ್ತದೆ.
(ಶೈಕ್ಷಣಿಕ ವಿದ್ಯಾರ್ಹತೆಯಲ್ಲಿ ಗಳಿಸಿರುವ ಒಟ್ಟು ಶೇಕಡವಾರು ಅಂಕಗಳು ಮತ್ತು ಅರ್ಹತಾ ಪರೀಕ್ಷೆಯಲ್ಲಿ ಗಳಿಸಿದ ಶೇಕಡವಾರು ಅಂಕಗಳ ಆಧಾರದ ಮೇಲೆ ಅಭ್ಯರ್ಥಿಗಳನ್ನು ಅಧಿಸೂಚಿಸಿರುವ ಮೀಸಲಾತಿಗಳಿಗನುಗುಣವಾಗಿ 1:5 ರ ಅನುಪಾತದಲ್ಲಿ ಸಂದರ್ಶನಕ್ಕೆ ಕರೆಯಲಾಗುವುದು)
3) ಅಭ್ಯರ್ಥಿಗಳು ಶೈಕ್ಷಣಿಕ ವಿದ್ಯಾರ್ಹತೆಯಲ್ಲಿ ಗಳಿಸಿರುವ ಒಟ್ಟು ಶೇಕಡವಾರು ಅಂಕಗಳು ಮತ್ತು ಅರ್ಹತಾ ಪರೀಕ್ಷೆಯಲ್ಲಿ ಗಳಿಸಿದ ಶೇಕಡವಾರು ಅಂಕಗಳು ಹಾಗೂ ಸಂದರ್ಶನದಲ್ಲಿ ಗಳಿಸುವ ಅಂಕಗಳ ಆಧಾರದ ಮೇಲೆ ಆಯ್ಕೆ ಮಾಡಲಾಗುವುದು.

## <u>II) ಬೆರಳಚ್ಚುಗಾರರು (Typists)</u>

I) ಹುದ್ದೆಗಳ ಸಂಖ್ಯೆ : 01

II) ವೇತನ ಶ್ರೇಣಿ : 21400-500-22400-550-24600-600-27000-650-29600-750-32600-850-36000-950-39800-1100-42000 ಹಾಗೂ ಲಭ್ಯವಿರುವ ಇತರೆ ಭತ್ಯೆಗಳು

:: **<u>ಹುದ್ದೆಯ ವರ್ಗೀಕರಣ</u>** ::

| ವರ್ಗ | ಇತರೆ | ಒಟ್ಟು |
|---|---|---|
| ಪರಿಶಿಷ್ಟ ಜಾತಿ | 1 | **01** |
| **ಒಟ್ಟು** | **01** | **01** |

:: **ಶೈಕ್ಷಣಿಕ ವಿದ್ಯಾರ್ಹತೆ** ::

1) ಅರ್ಜಿ ಸಲ್ಲಿಸಲು ನಿಗದಿಪಡಿಸಿರುವ ಕೊನೆಯ ದಿನಾಂಕದ ಒಳಗಾಗಿ ಅಭ್ಯರ್ಥಿಯು ಕರ್ನಾಟಕ ಪದವಿ ಪೂರ್ವ ಶಿಕ್ಷಣ ಇಲಾಖೆ ನಡೆಸುವ ದ್ವಿತೀಯ ಪಿ.ಯು.ಸಿ ಅಥವಾ ಕರ್ನಾಟಕ ತಾಂತ್ರಿಕ ಪರೀಕ್ಷಾ ಮಂಡಳಿಯು ನಡೆಸುವ ಡಿಪ್ಲೋಮಾ ಇನ್ ಕಮರ್ಷಿಯಲ್ ಪ್ರಾಕ್ಟೀಸ್ ಅಥವಾ ತತ್ಸಮಾನ ವಿದ್ಯಾರ್ಹತೆಯನ್ನು ಹೊಂದಿರಬೇಕು.

2) ಅರ್ಜಿ ಸಲ್ಲಿಸಲು ನಿಗದಿಪಡಿಸಿರುವ ಕೊನೆಯ ದಿನಾಂಕದ ಒಳಗಾಗಿ ಅಭ್ಯರ್ಥಿಯು ಕರ್ನಾಟಕ ಸಾರ್ವಜನಿಕ ಶಿಕ್ಷಣ ಇಲಾಖೆ ವತಿಯಿಂದ ನಡೆಸುವ ಕನ್ನಡ ಹಾಗೂ ಆಂಗ್ಲ ಭಾಷೆಯ ಬೆರಳಚ್ಚು ಪ್ರೌಢದರ್ಜೆ(ಸೀನಿಯರ್ ಗ್ರೇಡ್) ಪರೀಕ್ಷೆಯಲ್ಲಿ ತೇರ್ಗಡೆಯಾಗಿರಬೇಕು ಅಥವಾ ಕರ್ನಾಟಕ ತಾಂತ್ರಿಕ ಪರೀಕ್ಷಾ ಮಂಡಳಿಯು ನಡೆಸುವ ಡಿಪ್ಲೋಮಾ ಇನ್ ಕಮರ್ಷಿಯಲ್ ಪ್ರಾಕ್ಟೀಸ್ ಪದವಿಯೊಂದಿಗೆ ಕನ್ನಡ ಮತ್ತು ಆಂಗ್ಲ ಭಾಷೆಗಳ ಬೆರಳಚ್ಚು ಪೌಢದರ್ಜೆ ವಿಷಯಗಳನ್ನು ಐಚ್ಛಿಕ ವಿಷಯವಾಗಿ ಅಭ್ಯಸಿಸಿ ಉತ್ತೀರ್ಣರಾಗಿರಬೇಕು ಅಥವಾ ತತ್ಸಮಾನ ವಿದ್ಯಾರ್ಹತೆ ಹೊಂದಿರಬೇಕು.

:: **ಅರ್ಹತಾ ಪರೀಕ್ಷೆ** ::

1) ಅಭ್ಯರ್ಥಿಗಳಿಗೆ ಕನ್ನಡ ಮತ್ತು ಇಂಗ್ಲೀಷ್ ಭಾಷೆಗಳಲ್ಲಿ 15 ನಿಮಿಷಗಳ ಅವಧಿಗೆ ನೀಡಲಾಗುವ ಉಕ್ತಲೇಖನವನ್ನು ಬೆರಳಚ್ಚು ಯಂತ್ರದಲ್ಲಿ ಅಥವಾ ಕಂಪ್ಯೂಟರ್ ನಲ್ಲಿ ಬೆರಳಚ್ಚು ಮಾಡಿಸಿ ಅರ್ಹತಾ ಪರೀಕ್ಷೆಯನ್ನು ನಡೆಸಲಾಗುವುದು.

:: **ಆಯ್ಕೆ ವಿಧಾನ**::

1) ಕರ್ನಾಟಕ ನಾಗರೀಕ ಸೇವಾ (ಸಾಮಾನ್ಯ ನೇಮಕಾತಿ) ನಿಯಮ ಹಾಗೂ ಅಧೀನ ನ್ಯಾಯಾಲಯಗಳ (ಲಿಪಿಕ ಹಾಗೂ ಇತರೆ ಹುದ್ದೆಗಳು) (ನೇಮಕಾತಿ) ನಿಯಮಗಳು 1982 ಮತ್ತು ತಿದ್ದುಪಡಿ ನಿಯಮಗಳು 2007 ಹಾಗೂ 2021 ರ ಅನ್ವಯ ನೇರ ನೇಮಕಾತಿಯನ್ನು ನಡೆಸಲಾಗುವುದು.

2) ಪ್ರತಿ ಅರ್ಹತಾ ಪರೀಕ್ಷೆಯು ಗರಿಷ್ಠ 100 ಅಂಕಗಳನ್ನು ಒಳಗೊಂಡಿದ್ದು ಅವುಗಳಲ್ಲಿ ತೇರ್ಗಡೆಯಾಗಲು ಕನಿಷ್ಠ 50 ಅಂಕಗಳನ್ನು ಅಭ್ಯರ್ಥಿಗಳು ಪಡೆಯಬೇಕಾಗಿರುತ್ತದೆ.
(ಶೈಕ್ಷಣಿಕ ವಿದ್ಯಾರ್ಹತೆಯಲ್ಲಿ ಗಳಿಸಿರುವ ಒಟ್ಟು ಶೇಕಡವಾರು ಅಂಕಗಳು ಮತ್ತು ಅರ್ಹತಾ ಪರೀಕ್ಷೆಯಲ್ಲಿ ಗಳಿಸಿದ ಶೇಕಡವಾರು ಅಂಕಗಳ ಆಧಾರದ ಮೇಲೆ ಅಭ್ಯರ್ಥಿಗಳನ್ನು ಅಧಿಸೂಚಿಸಿರುವ ಮೀಸಲಾತಿಗಳಿಗನುಗುಣವಾಗಿ 1:5 ರ ಅನುಪಾತದಲ್ಲಿ ಸಂದರ್ಶನಕ್ಕೆ ಕರೆಯಲಾಗುವುದು)

3) ಅಭ್ಯರ್ಥಿಗಳು ಶೈಕ್ಷಣಿಕ ವಿದ್ಯಾರ್ಹತೆಯಲ್ಲಿ ಗಳಿಸಿರುವ ಒಟ್ಟು ಶೇಕಡವಾರು ಅಂಕಗಳು ಮತ್ತು ಅರ್ಹತಾ ಪರೀಕ್ಷೆಯಲ್ಲಿ ಗಳಿಸಿದ ಶೇಕಡವಾರು ಅಂಕಗಳು ಹಾಗೂ ಸಂದರ್ಶನದಲ್ಲಿ ಗಳಿಸುವ ಅಂಕಗಳ ಆಧಾರದ ಮೇಲೆ ಆಯ್ಕೆ ಮಾಡಲಾಗುವುದು.

## III) ಆದೇಶ ಜಾರಿಕಾರರು(Process-Servers)

I) ಹುದ್ದೆಗಳ ಸಂಖ್ಯೆ : 02

II) ವೇತನ ಶ್ರೇಣಿ : 19950-450-20400-500-22400-550-24600-600-27000-650-29600-750-32600-850-36000-950-37900 ಹಾಗೂ ಲಭ್ಯವಿರುವ ಇತರೆ ಭತ್ಯೆಗಳು

:: **ಹುದ್ದೆಯ ವರ್ಗೀಕರಣ** ::

| ವರ್ಗ | ಇತರೆ | ಒಟ್ಟು |
|---|---|---|
| ಸಾಮಾನ್ಯ | 1 | **01** |
| ಪರಿಶಿಷ್ಟ ಜಾತಿ | 1 | **01** |
| **ಒಟ್ಟು** | **02** | **02** |

:: **ಶೈಕ್ಷಣಿಕ ವಿದ್ಯಾರ್ಹತೆ** ::

1) ಅರ್ಜಿ ಸಲ್ಲಿಸಲು ನಿಗದಿಪಡಿಸಿರುವ ಕೊನೆಯ ದಿನಾಂಕದ ಒಳಗಾಗಿ ಅಭ್ಯರ್ಥಿಯು ಕರ್ನಾಟಕ ಪ್ರೌಢಶಿಕ್ಷಣ ಪರೀಕ್ಷಾ ಮಂಡಳಿಯು ನಡೆಸುವ ಎಸ್.ಎಸ್.ಎಲ್.ಸಿ ಪರೀಕ್ಷೆಯಲ್ಲಿ ಉತ್ತೀರ್ಣರಾಗಿರಬೇಕು ಅಥವಾ ತತ್ಸಮಾನ ವಿದ್ಯಾರ್ಹತೆಯನ್ನು ಹೊಂದಿರಬೇಕು.

2) ಲಘು (LMV) ಹಾಗೂ ಭಾರಿ (Heavy Badge) ವಾಹನ ಚಾಲನಾ ಪರವಾನಗಿ ಪತ್ರ ಹೊಂದಿದ ಅಭ್ಯರ್ಥಿಗಳಿಗೆ ಆದ್ಯತೆ ನೀಡಲಾಗುವುದು.

:: **ವಿಶೇಷ ಸೂಚನೆ** ::

ಹತ್ತನೇ ತರಗತಿಯ ಅಂಕಗಳು ಶ್ರೇಣಿಯಲ್ಲಿದ್ದರೆ(Grade), ಅದನ್ನು ಸಂಬಂಧಪಟ್ಟ ಶಾಲಾ ಮುಖ್ಯಸ್ಥರಿಂದ ಅಂಕಗಳಾಗಿ ಪರಿವರ್ತಿಸಿ ಗರಿಷ್ಠ ಅಂಕಗಳು ಮತ್ತು ಪಡೆದ ಅಂಕಗಳ ಒಟ್ಟು ಶೇಕಡಾವಾರನ್ನು ಸರಿಯಾಗಿ 100 ರ ಪ್ರತಿಶತದಲ್ಲಿ ನಮೂದು ಮಾಡುವುದು. ಒಂದು ವೇಳೆ ಅವುಗಳಲ್ಲಿ ವ್ಯತ್ಯಾಸ ಕಂಡುಬಂದಲ್ಲಿ ಅಂತಹ ಅರ್ಜಿಗಳನ್ನು ಯಾವುದೇ ಸೂಚನೆ ಇಲ್ಲದೆ ತಿರಸ್ಕರಿಸಲಾಗುವುದು.

:: **ಆಯ್ಕೆ ವಿಧಾನ**::

1) ಕರ್ನಾಟಕ ನಾಗರೀಕ ಸೇವಾ (ಸಾಮಾನ್ಯ ನೇಮಕಾತಿ) ನಿಯಮ ಹಾಗೂ ಅಧೀನ ನ್ಯಾಯಾಲಯಗಳ (ಲಿಪಿಕ ಹಾಗೂ ಇತರೆ ಹುದ್ದೆಗಳು) (ನೇಮಕಾತಿ) ನಿಯಮಗಳು 1982 ಮತ್ತು ತಿದ್ದುಪಡಿ ನಿಯಮಗಳು 2007 ಹಾಗೂ 2021 ರ ಅನ್ವಯ ನೇರ ನೇಮಕಾತಿಯನ್ನು ನಡೆಸಲಾಗುವುದು.

2) ಕನ್ನಡ ಓದಲು ಮತ್ತು ಬರೆಯಲು ತಿಳಿದಿರಬೇಕು. ಅಭ್ಯರ್ಥಿ ಹೊಂದಿರುವ ಪ್ರಾವೀಣ್ಯತೆ ಮತ್ತು ಅಭ್ಯರ್ಥಿಯ ಸಾಮಾನ್ಯ ಜ್ಞಾನದ ಬಗ್ಗೆ ಸಂದರ್ಶನ ನಡೆಸಲಾಗುವುದು.

3) ಆದೇಶ ಜಾರಿಕಾರರ ಹುದ್ದೆಗೆ 10 ನೇ ತರಗತಿ ಪರೀಕ್ಷೆಯಲ್ಲಿ ಪಡೆದ ಗರಿಷ್ಠ ಅಂಕಗಳ ಆಧಾರದ ಮೇಲೆ ಒಂದು ಹುದ್ದೆಗೆ 25 ಅಭ್ಯರ್ಥಿಗಳನ್ನು (1:25 ಅನುಪಾತದಲ್ಲಿ) ಮಾತ್ರ ಸಂದರ್ಶನಕ್ಕೆ ಕರೆಯಲಾಗುವುದು ಮತ್ತು ಸಂದರ್ಶನದಲ್ಲಿ ಗಳಿಸಿದ ಅಂಕಗಳ ಆಧಾರದ ಮೇಲೆ ಆಯ್ಕೆ ಮಾಡಲಾಗುವುದು. ಸಂದರ್ಶನವು 10 ಅಂಕಗಳನ್ನು ಒಳಗೊಂಡಿರುತ್ತದೆ.

## IV) ಸಿಪಾಯಿಗಳು(Peon)

I) ಹುದ್ದೆಗಳ ಸಂಖ್ಯೆ : 33 (32+01 ಹಿಂಬಾಕಿ)

II) ವೇತನ ಶ್ರೇಣಿ : 17000-400-18600-450-20400-500-22400-550-24600-600-27000-650-28950 ಹಾಗೂ ಲಭ್ಯವಿರುವ ಇತರೆ ಭತ್ಯೆಗಳು

**:: ಹುದ್ದೆಯ ವರ್ಗೀಕರಣ ::**

**ಅ) ಹೊಸ ಹುದ್ದೆಗಳುಃ**

| ವರ್ಗ | ಇತರೆ | ಮಹಿಳಾ ಅಭ್ಯರ್ಥಿ | ಗ್ರಾಮೀಣ ಅಭ್ಯರ್ಥಿ | ಅಂಗವಿಕಲ ಅಭ್ಯರ್ಥಿ | ಮಾಜಿ ಸೈನಿಕ | ಕನ್ನಡ ಮಾಧ್ಯಮ ಅಭ್ಯರ್ಥಿ | ಒಟ್ಟು |
|---|---|---|---|---|---|---|---|
| ಸಾಮಾನ್ಯ | 02 | 05 | 04 | 01* | 01 | 01 | 14 |
| ಪರಿಶಿಷ್ಟ ಜಾತಿ | 01 | 02 | 01 | 01* | -- | -- | 05 |
| ಪರಿಶಿಷ್ಟ ಪಂಗಡ | 01 | 01 | 01 | – | -- | -- | 03 |
| ಪ್ರವರ್ಗ - I | 01 | 01 | -- | -- | -- | -- | 02 |
| ಪ್ರವರ್ಗ- II(A) | 01 | 02 | 01 | 01* | -- | -- | 05 |
| ಪ್ರವರ್ಗ - II(B) | 01 | -- | -- | -- | -- | -- | 01 |
| ಪ್ರವರ್ಗ - III(A) | 01 | -- | -- | -- | -- | -- | 01 |
| ಪ್ರವರ್ಗ - III(B) | 01 | -- | -- | -- | – | -- | 01 |
| **ಒಟ್ಟು** | 09 | 11 | 07 | 03 | 01 | 01 | 32 |

***** ಚಿಹ್ನೆಯನ್ನು ತೋರಿಸಿರುವ ಹುದ್ದೆಗಳು ಅಂಧ ಹಾಗೂ ದೃಷ್ಠಿಮಾಂದ್ಯ (Blindness and Low Vision) ಅಭ್ಯರ್ಥಿಗಳಿಗೆ ಮಾತ್ರ ಮೀಸಲಿರಿಸಲಾಗಿದೆ. ಒಂದು ವೇಳೆ ಅಧಿಸೂಚಿಸಿರುವ ಅಂಗವಿಕಲ ಅಭ್ಯರ್ಥಿಗಳು (ಅಂಧ ಹಾಗೂ ದೃಷ್ಠಿಮಾಂದ್ಯ) ಲಭ್ಯವಾಗದೇ ಇದ್ದ ಪಕ್ಷದಲ್ಲಿ ಸದರಿ ರಿಕ್ತಸ್ಥಾನದ ಹುದ್ದೆಯನ್ನು ಮುಂದಿನ ನೇಮಕಾತಿಗೆ ಮುಂದಕ್ಕೊಯ್ಯಲಾಗುವುದು (Carry Forward).

**ಆ) ಹಿಂಬಾಕಿ/ ಬ್ಯಾಕ್ ಲಾಗ್ ಹುದ್ದೆ:**

| ವರ್ಗ | ಅಂಗವಿಕಲ ಅಭ್ಯರ್ಥಿ | ಒಟ್ಟು |
|---|---|---|
| ಸಾಮಾನ್ಯ | 1** | **01** |
| **ಒಟ್ಟು** | **01** | **01** |

****** ಚಿಹ್ನೆಯನ್ನು ತೋರಿಸಿರುವ ಹುದ್ದೆಯು ಕುಷ್ಠರೋಗದಿಂದ ವಿಮುಕ್ತರಾದ(Leprosy Cured Person) ಅಭ್ಯರ್ಥಿಗೆ ಮೀಸಲಿರಿಸಲಾಗಿದೆ ಹಾಗೂ ಸದರಿ ಹುದ್ದೆಯು ಹಿಂಬಾಕಿ ಉಳಿದ ಹುದ್ದೆಯಾದ್ದರಿಂದ ಅಧಿಸೂಚಿಸಿದ ಅಂಗವೈಕಲ್ಯವನ್ನುಳ್ಳ ಅಭ್ಯರ್ಥಿಯು ಲಭ್ಯವಾಗದೇ ಇದ್ದ ಪಕ್ಷದಲ್ಲಿ ಇತರೆ ಅಂಗವೈಕಲ್ಯವನ್ನುಳ್ಳ ಅಭ್ಯರ್ಥಿಯಿಂದ ಭರ್ತಿ ಮಾಡಿಕೊಳ್ಳಲಾಗುವುದು, ಒಂದು ವೇಳೆ ಯಾವುದೇ ಅಂಗವೈಕಲ್ಯವನ್ನುಳ್ಳ ಅಭ್ಯರ್ಥಿಗಳು ಲಭ್ಯರಾಗದಿದ್ದಲ್ಲಿ ಇತರೆ ಅರ್ಹ ಅಭ್ಯರ್ಥಿಯಿಂದ ಭರ್ತಿ ಮಾಡಿಕೊಳ್ಳಲಾಗುವುದು.

:: **<u>ಶೈಕ್ಷಣಿಕ ವಿದ್ಯಾರ್ಹತೆ</u>** ::

ಅರ್ಜಿ ಸಲ್ಲಿಸಲು ನಿಗದಿಪಡಿಸಿರುವ ಕೊನೆಯ ದಿನಾಂಕದ ಒಳಗಾಗಿ ಅಭ್ಯರ್ಥಿಯು ಕರ್ನಾಟಕ ಪ್ರೌಢಶಿಕ್ಷಣ ಪರೀಕ್ಷಾ ಮಂಡಳಿಯು ನಡೆಸುವ ಎಸ್.ಎಸ್.ಎಲ್.ಸಿ ಪರೀಕ್ಷೆಯಲ್ಲಿ ಉತ್ತೀರ್ಣರಾಗಿರಬೇಕು ಅಥವಾ ತತ್ಸಮಾನ ವಿದ್ಯಾರ್ಹತೆಯನ್ನು ಹೊಂದಿರಬೇಕು.

:: **<u>ವಿಶೇಷ ಸೂಚನೆ</u>** ::

ಹತ್ತನೇ ತರಗತಿಯ ಅಂಕಗಳು ಶ್ರೇಣಿಯಲ್ಲಿದ್ದರೆ(Grade), ಅದನ್ನು ಸಂಬಂಧಪಟ್ಟ ಶಾಲಾ ಮುಖ್ಯಸ್ಥರಿಂದ ಅಂಕಗಳಾಗಿ ಪರಿವರ್ತಿಸಿ ಗರಿಷ್ಠ ಅಂಕಗಳು ಮತ್ತು ಪಡೆದ ಅಂಕಗಳ ಒಟ್ಟು ಶೇಕಡಾವಾರನ್ನು ಸರಿಯಾಗಿ 100 ರ ಪ್ರತಿಶತದಲ್ಲಿ ನಮೂದು ಮಾಡುವುದು. ಒಂದು ವೇಳೆ ಅವುಗಳಲ್ಲಿ ವ್ಯತ್ಯಾಸ ಕಂಡುಬಂದಲ್ಲಿ ಅಂತಹ ಅರ್ಜಿಗಳನ್ನು ಯಾವುದೇ ಸೂಚನೆ ಇಲ್ಲದೇ ತಿರಸ್ಕರಿಸಲಾಗುವುದು.

:: **<u>ಆಯ್ಕೆ ವಿಧಾನ</u>**::

1) ಕರ್ನಾಟಕ ನಾಗರೀಕ ಸೇವಾ (ಸಾಮಾನ್ಯ ನೇಮಕಾತಿ) ನಿಯಮ ಹಾಗೂ ಅಧೀನ ನ್ಯಾಯಾಲಯಗಳ (ಲಿಪಿಕ ಹಾಗೂ ಇತರೆ ಹುದ್ದೆಗಳು) (ನೇಮಕಾತಿ) ನಿಯಮಗಳು 1982 ಮತ್ತು ತಿದ್ದುಪಡಿ ನಿಯಮಗಳು 2007 ಹಾಗೂ 2021 ರ ಅನ್ವಯ ನೇರ ನೇಮಕಾತಿಯನ್ನು ನಡೆಸಲಾಗುವುದು.

2) ಕನ್ನಡ ಓದಲು ಮತ್ತು ಬರೆಯಲು ತಿಳಿದಿರಬೇಕು.

3) ಸಿಪಾಯಿ ಹುದ್ದೆಗೆ ಹತ್ತನೇ ತರಗತಿ ಪರೀಕ್ಷೆಯಲ್ಲಿ ಪಡೆದ ಗರಿಷ್ಠ ಅಂಕಗಳ ಆಧಾರದ ಮೇಲೆ ಒಂದು ಹುದ್ದೆಗೆ ಹತ್ತು ಅಭ್ಯರ್ಥಿಗಳನ್ನು (1:10 ಅನುಪಾತದಲ್ಲಿ) ಮಾತ್ರ ಸಂದರ್ಶನಕ್ಕೆ ಕರೆಯಲಾಗುವುದು ಮತ್ತು ಸಂದರ್ಶನದಲ್ಲಿ ಗಳಿಸಿದ ಅಂಕಗಳ ಆಧಾರದ ಮೇಲೆ ಆಯ್ಕೆ ಮಾಡಲಾಗುವುದು. ಸಂದರ್ಶನವು 10 ಅಂಕಗಳನ್ನು ಒಳಗೊಂಡಿರುತ್ತದೆ.

**:: ಎಸ್.ಎಸ್.ಎಲ್.ಸಿ ವಿದ್ಯಾರ್ಹತೆಗೆ ತತ್ಸಮಾನವಾದ ವಿದ್ಯಾರ್ಹತೆಗಳು::**

(ಸರ್ಕಾರದ ಸುತ್ತೋಲೆ ಸಂಖ್ಯೆ: ಸಿಆಸುಇ 81 ಸೇವನೆ 2017, ದಿನಾಂಕ: 27.02.2018 ರನ್ವಯ ಈ ಕೆಳಕಂಡ ವಿದ್ಯಾರ್ಹತೆಗಳನ್ನು ಎಸ್.ಎಸ್.ಎಲ್.ಸಿ ವಿದ್ಯಾರ್ಹತೆಗೆ ತತ್ಸಮಾನವೆಂದು ಪರಿಗಣಿಸಲಾಗುವುದು)

- ಸಿಬಿಎಸ್‌ಸಿ ಮತ್ತು ಐಸಿಎಸ್ಇ ಮಂಡಳಿಯು ನಡೆಸುವ ಕ್ಲಾಸ್ 10 ಪರೀಕ್ಷೆ.
- ಇತರೆ ರಾಜ್ಯ ಸರ್ಕಾರದ ಪರೀಕ್ಷಾ ಮಂಡಳಿಗಳಿಂದ ನಡೆಸುವ ಕ್ಲಾಸ್ 10 ಪರೀಕ್ಷೆ.
- ನ್ಯಾಷನಲ್ ಇನ್‌ಸ್ಟಿಟ್ಯೂಟ್ ಆಫ್ ಓಪನ್ ಸ್ಕೂಲಿಂಗ್ (ಎನ್.ಐ.ಓ.ಎಸ್) ವತಿಯಿಂದ ನಡೆಸುವ ಪ್ರೌಢ ಶಿಕ್ಷಣ ಕೋರ್ಸ್.
- ಕರ್ನಾಟಕ ಪ್ರೌಢಶಿಕ್ಷಣ ಪರೀಕ್ಷಾ ಮಂಡಳಿಯು ನಡೆಸುವ ಪ್ರೌಢ ಶಿಕ್ಷಣ ಮಟ್ಟದ ಕೋರ್ಸ್ (ಕೆ.ಓ.ಎಸ್)

**::ದ್ವಿತೀಯ ಪಿಯುಸಿಗೆ ತತ್ಸಮಾನವಾದ ವಿದ್ಯಾರ್ಹತೆಗಳು::**

(ಸರ್ಕಾರದ ಸುತ್ತೋಲೆ ಸಂಖ್ಯೆ: ಸಿಆಸುಇ 81 ಸೇವನೆ 2017, ದಿನಾಂಕ: 27.02.2018 ರನ್ವಯ ಈ ಕೆಳಕಂಡ ವಿದ್ಯಾರ್ಹತೆಗಳನ್ನು ದ್ವಿತೀಯ ಪಿಯುಸಿಗೆ ತತ್ಸಮಾನವೆಂದು ಪರಿಗಣಿಸಲಾಗುವುದು.)

- ಸಿಬಿಎಸ್‌ಸಿ ಮತ್ತು ಐಸಿಎಸ್‌ಸಿ ಮಂಡಳಿಯು ನಡೆಸುವ ಕ್ಲಾಸ್ 12 ಪರೀಕ್ಷೆ.
- ಇತರೆ ರಾಜ್ಯ ಸರ್ಕಾರದ ಪರೀಕ್ಷಾ ಮಂಡಳಿಗಳಿಂದ ನಡೆಸುವ ಕ್ಲಾಸ್ 12 ಪರೀಕ್ಷೆ.
- ನ್ಯಾಷನಲ್ ಇನ್‌ಸ್ಟಿಟ್ಯೂಟ್ ಆಫ್ ಓಪನ್ ಸ್ಕೂಲಿಂಗ್ (ಎನ್.ಐ.ಓ.ಎಸ್) ವತಿಯಿಂದ ನಡೆಸುವ ಉನ್ನತ ಪ್ರೌಢ ಶಿಕ್ಷಣ ಕೋರ್ಸ್/ ಹೆಚ್.ಎಸ್.ಸಿ.
- ಮೂರು ವರ್ಷಗಳ ಡಿಪ್ಲೋಮಾ ಅಥವಾ ಎರಡು ವರ್ಷಗಳ ಐಟಿಐ ಕೋರ್ಸ ಅಥವಾ ಎರಡು ವರ್ಷಗಳ ವೃತ್ತಿ ಶಿಕ್ಷಣ ಡಿಪ್ಲೋಮಾ (ಜೆ.ಓ.ಸಿ/ಜೆ.ಓ.ಡಿ.ಸಿ/ಜೆ.ಎಲ್.ಡಿ.ಸಿ)

(ಅಭ್ಯರ್ಥಿಗಳು ಎನ್.ಐ.ಓ.ಎಸ್. ವತಿಯಿಂದ ನಡೆಸುವ ಒಂದು ಭಾಷಾ ಕೋರ್ಸ್ ಮತ್ತು ಒಂದು ಶೈಕ್ಷಣಿಕ ವಿಷಯದಲ್ಲಿ (ದೂರಕಲಿಕೆ ಮಾದರಿಯಲ್ಲಿ) ಅಥವಾ ಪದವಿ ಪೂರ್ವ ಮಂಡಳಿಯು ನಡೆಸುವ ಪರೀಕ್ಷೆಯಲ್ಲಿ ಒಂದು ಭಾಷೆ ಮತ್ತು ಒಂದು ವಿಷಯದಲ್ಲಿ ಉತ್ತೀರ್ಣರಾದಲ್ಲಿ ಮಾತ್ರ ಪಿ.ಯು.ಸಿ.ಗೆ ತತ್ಸಮಾನವೆಂದು ಪರಿಗಣಿಸಬಹುದು)

**:: ವಯೋಮಿತಿ ::**

ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದಂದು ಅಭ್ಯರ್ಥಿಗಳು ಈ ಕೆಳಕಂಡ ಕನಿಷ್ಠ ವಯೋಮಿತಿಯನ್ನು ಹೊಂದಿರಬೇಕು ಮತ್ತು ಗರಿಷ್ಠ ವಯೋಮಿತಿಯನ್ನು ಮೀರಿರಬಾರದು.

| | | | | |
|---|---|---|---|---|
| ಕನಿಷ್ಠ ವಯೋಮಿತಿ | - | 18 ವರ್ಷಗಳು | | |
| ಗರಿಷ್ಠ ವಯೋಮಿತಿ | - | ಸಾಮಾನ್ಯ ವರ್ಗ | - | 35 ವರ್ಷಗಳು |
| | - | ಪ್ರವರ್ಗ-IIA, IIB, IIIA ಹಾಗೂ IIIB | - | 38 ವರ್ಷಗಳು |
| | - | ಪ.ಜಾತಿ, ಪ.ಪಂಗಡ ಹಾಗೂ ಪ್ರವರ್ಗ-1 | - | 40 ವರ್ಷಗಳು |

:: **ವಯೋಮಿತಿ ಸಡಿಲಿಕೆ** ::

ಕರ್ನಾಟಕ ನಾಗರೀಕ ಸೇವೆಗಳು (ಸಾಮಾನ್ಯ ನೇಮಕಾತಿ) ನಿಯಮ 1977 ರಲ್ಲಿ ನಿರ್ದಿಷ್ಟಪಡಿಸಿರುವಂತೆ ಈ ಕೆಳಗಿನ ಸಂದರ್ಭಗಳಲ್ಲಿ ಸದರಿ ನಿಯಮಗಳಲ್ಲಿ ನಿಗದಿಪಡಿಸಿರುವ ಗರಿಷ್ಠ ವಯೋಮಿತಿಯನ್ನು ಕೆಳಗೆ ತಿಳಿಸಿರುವಷ್ಟರ ಮಟ್ಟಿಗೆ ಹೆಚ್ಚಿಸಲಾಗುವುದು. (ಈ ಬಗ್ಗೆ ಸಡಿಲಿಕೆ ಕೋರಿದಲ್ಲಿ ಪ್ರಮಾಣ ಪತ್ರವನ್ನು ಅರ್ಜಿ ಸಲ್ಲಿಸಲು ಇರುವ ಕೊನೆಯ ದಿನಾಂಕದೊಳಗಾಗಿ ಪಡೆದುಕೊಂಡು ಹಾಜರುಪಡಿಸುವುದು)

| | | |
|---|---|---|
| 1) | ಕರ್ನಾಟಕ ರಾಜ್ಯ ಸರ್ಕಾರದಲ್ಲಿ ಅಥವಾ ಸ್ಥಳೀಯ ಪ್ರಾಧಿಕಾರದಲ್ಲಿ ಅಥವಾ ರಾಜ್ಯ ಅಧಿನಿಯಮ ಅಥವಾ ಕೇಂದ್ರ ಅಧಿನಿಯಮದ ಮೂಲಕ ಸ್ಥಾಪನೆಯಾದ ಅಥವಾ ರಾಜ್ಯ ಅಧಿನಿಯಮದ ಅಥವಾ ಕೇಂದ್ರ ಅಧಿನಿಯಮದ ಮೂಲಕ ಸ್ಥಾಪನೆಗೊಂಡು ಕರ್ನಾಟಕ ರಾಜ್ಯ ಸರ್ಕಾರದ ಸ್ವಾಮ್ಯ ಅಥವಾ ನಿಯಂತ್ರಣದಲ್ಲಿರುವ ನಿಗಮದಲ್ಲಿ ಹುದ್ದೆ ಹೊಂದಿರುವ ಅಥವಾ ಹಿಂದೆ ಹೊಂದಿದ ಅಭ್ಯರ್ಥಿಗಳಿಗೆ | ಸೇವೆ ಸಲ್ಲಿಸಿರುವಷ್ಟು ವರ್ಷಗಳು ಅಥವಾ 10 ವರ್ಷಗಳ ಅವಧಿ ಅದರಲ್ಲಿ ಯಾವುದು ಕಡಿಮೆಯೋ ಅಷ್ಟು ವರ್ಷಗಳು. |
| 2) | ಅಭ್ಯರ್ಥಿಯು ಮಾಜಿ ಸೈನಿಕನಾಗಿದ್ದಲ್ಲಿ | ಅವರು ಸಶಸ್ತ್ರ ದಳಗಳಲ್ಲಿ ಎಷ್ಟು ವರ್ಷ ಸೇವೆ ಸಲ್ಲಿಸಿರುವರೋ ಆ ವರ್ಷಗಳಿಗೆ 03 ವರ್ಷಗಳನ್ನು ಸೇರಿಸಿದರೆ ಎಷ್ಟು ವರ್ಷಗಳಾಗುವುದೋ ಅಷ್ಟು ವರ್ಷಗಳು. |
| 3) | National Cadet Corps ನಲ್ಲಿ ಪೂರ್ಣ ಕಾಲಿಕ ಪರಿವೀಕ್ಷಕರಾಗಿ ಸೇವೆ ಸಲ್ಲಿಸಿ ಬಿಡುಗಡೆಯಾಗಿರುವ ವ್ಯಕ್ತಿಗಳಿಗೆ | ಕೆಡೆಟ್ ಪರಿವೀಕ್ಷಕನಾಗಿ ಸೇವೆ ಸಲ್ಲಿಸಿದಷ್ಟು ವರ್ಷಗಳು |
| 4) | ರಾಜ್ಯ ಸರ್ಕಾರದಿಂದ ಪುರಸ್ಕೃತವಾದ ಗ್ರಾಮೀಣ ಔದ್ಯಮೀಕರಣ ಯೋಜನೆಯ ಮೇರೆಗೆ ನೇಮಕಗೊಂಡು ಗ್ರಾಮ ಸಮೂಹ ಪರಿಶೀಲಕನಾಗಿ ಈಗ ಕೆಲಸ ಮಾಡುತ್ತಿದ್ದರೆ ಅಥವಾ ಹಿಂದೆ ಇದ್ದ ಅಭ್ಯರ್ಥಿಗಳಿಗೆ | ಗ್ರಾಮ ಸಮೂಹ ಪರಿಶೀಲಕನಾಗಿ ಸೇವೆ ಸಲ್ಲಿಸಿದಷ್ಟು ವರ್ಷಗಳು |
| 5) | ಅಂಗವಿಕಲ ಅಭ್ಯರ್ಥಿಗಳಿಗೆ | 10 ವರ್ಷಗಳು |
| 6) | ಕರ್ನಾಟಕ ರಾಜ್ಯ ಸರ್ಕಾರದಲ್ಲಿರುವ ಭಾರತ ಸರ್ಕಾರದ ಜನಗಣತಿ ಸಂಸ್ಥೆಯಲ್ಲಿ ಈಗ ಹುದ್ದೆಯನ್ನು ಹೊಂದಿದ್ದರೆ ಅಥವಾ ಹಿಂದೆ ಹೊಂದಿದ್ದ ಅಭ್ಯರ್ಥಿಗಳಿಗೆ | ಸೇವೆ ಸಲ್ಲಿಸಿರುವ ವರ್ಷಗಳು ಅಥವಾ 5 ವರ್ಷಗಳ ಅವಧಿ ಅದರಲ್ಲಿ ಯಾವುದು ಕಡಿಮೆಯೋ ಅಷ್ಟು ವರ್ಷಗಳು |
| 7) | ವಿಧವೆಯಾಗಿದ್ದಲ್ಲಿ<br>(ಅಭ್ಯರ್ಥಿಯು ಸಕ್ಷಮ ಪ್ರಾಧಿಕಾರದಿಂದ ತಾನು ವಿಧವೆಯೆಂದು ಹಾಗೂ ಮರು ಮದುವೆಯಾಗಿರುವುದಿಲ್ಲವೆಂಬ ಪ್ರಮಾಣಪತ್ರವನ್ನು ಕೊನೆಯ ದಿನಾಂಕದೊಳಗೆ ಹೊಂದಿರಬೇಕು) | 10 ವರ್ಷಗಳು |

| | | |
|---|---|---|
| 8) | ಜೀತ ಕಾರ್ಮಿಕನಾಗಿದ್ದ ಪಕ್ಷದಲ್ಲಿ ಸದರಿ ಅಧಿನಿಯಮ ಅಥವಾ 1957 ರ ಕರ್ನಾಟಕ ಜೀತ ಕಾರ್ಮಿಕ ಪದ್ಧತಿ (ರದ್ದಯಾತಿ) ಆದೇಶದ ಮೇರೆಗೆ ಜೀತ ಸಾಲವನ್ನು ಸಂದಾಯ ಮಾಡುವ ಹೊಣೆಯಿಂದ ಬಿಡುಗಡೆಯಾಗಿದ್ದಾನೆಂದು ಪ್ರಮಾಣ ಪತ್ರವನ್ನು ಜಿಲ್ಲಾ ಮ್ಯಾಜಿಸ್ಟ್ರೇಟ್‌ರಿಂದ ಪಡೆದ ಪ್ರಮಾಣ ಪತ್ರ | 10 ವರ್ಷಗಳು |

:: **<u>ಅರ್ಜಿ ಸಲ್ಲಿಸುವ ವಿಧಾನ</u>** ::

ನಿಗದಿತ ಅರ್ಜಿಶುಲ್ಕ- ಪಾವತಿಸಬೇಕಾದ ಶುಲ್ಕ ಹಾಗೂ ವಿಧಾನ

| ವಿವಿಧ ವರ್ಗೀಕರಣ | ಶೀಘ್ರಲಿಪಿಗಾರರು ಹಾಗೂ ಬೆರಳಚ್ಚುಗಾರರ ಹುದ್ದೆಗೆ | ಆದೇಶ ಜಾರೀಕಾರರ ಹಾಗೂ ಸಿಪಾಯಿ ಹುದ್ದೆಗೆ |
|---|---|---|
| ಸಾಮಾನ್ಯ ವರ್ಗ, ಪ್ರವರ್ಗ IIA, IIB, IIIA, IIIB ಗೆ ಸೇರಿದ ಅಭ್ಯರ್ಥಿಗಳಿಗೆ. | ರೂ. 300/- ಅರ್ಜಿಶುಲ್ಕ ಪಾವತಿಸಬೇಕು. | ರೂ. 250/- ಅರ್ಜಿಶುಲ್ಕ ಪಾವತಿಸಬೇಕು. |
| ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ, ಪ್ರವರ್ಗ-I ಹಾಗೂ ಅಂಗವಿಕಲ ಅಭ್ಯರ್ಥಿಗಳಿಗೆ. | ಶುಲ್ಕ ಪಾವತಿಯಿಂದ ವಿನಾಯಿತಿ ಇರುತ್ತದೆ. | |

ಅಭ್ಯರ್ಥಿಗಳು ನಿಗದಿತ ಶುಲ್ಕವನ್ನು ಈ ನ್ಯಾಯಾಲಯದ ವೆಬ್‌ಸೈಟ್ https://belagavi.dcourts.gov.in/notice-category/recruitments/ ರಲ್ಲಿ ನೀಡಲಾದ ಲಿಂಕ್ ಮುಖಾಂತರ ಸ್ಟೇಟ್ ಬ್ಯಾಂಕ್ ಆಫ್ ಇಂಡಿಯಾದ State Bank Collect ಮೂಲಕ Online Payment through Net Banking/Credit Card/Debit Card/UPI ID/ QR Code ಸೌಲಭ್ಯದ ಮೂಲಕ ಪಾವತಿಸಬಹುದಾಗಿದೆ. ಶುಲ್ಕವನ್ನು ಆನ್ ಲೈನ್ ಮೂಲಕ ಹೊರತು ಪಡಿಸಿ ಯಾವುದೇ ಚಲನ್/ ಡಿಮ್ಯಾಂಡ್ ಡ್ರಾಫ್ಟ್ / ಪೋಸ್ಟಲ್ ಆರ್ಡರ್/ ಮನಿ ಆರ್ಡರ್ ಇವುಗಳನ್ನು ಸ್ವೀಕರಿಸಲಾಗುವುದಿಲ್ಲ. ಶುಲ್ಕವನ್ನು ಪಾವತಿಸದ ಅಭ್ಯರ್ಥಿಗಳ ಅರ್ಜಿಗಳನ್ನು ತಿರಸ್ಕರಿಸಲಾಗುವುದು (ಶುಲ್ಕ ಪಾವತಿಯಿಂದ ವಿನಾಯಿತಿ ಇರುವ ಅಭ್ಯರ್ಥಿಗಳನ್ನು ಹೊರತುಪಡಿಸಿ), ಒಮ್ಮೆ ಶುಲ್ಕವನ್ನು ಪಾವತಿಸಿದ ನಂತರ ಅದನ್ನು ಯಾವುದೇ ಸಂದರ್ಭದಲ್ಲಿ ಹಿಂತಿರುಗಿಸಲಾಗುವುದಿಲ್ಲ.

**ಅಭ್ಯರ್ಥಿಗಳು ಆನ್-ಲೈನ್ (On-line) ಮೂಲಕ ಅರ್ಜಿ ಭರ್ತಿ ಮಾಡುವ ಮೊದಲು ಕೆಳಕಂಡ ಸೂಚನೆಗಳನ್ನು ಕಡ್ಡಾಯವಾಗಿ ತಿಳಿದುಕೊಳ್ಳತಕ್ಕದ್ದು**

1) ಅಭ್ಯರ್ಥಿಯು ಅರ್ಜಿಯನ್ನು ಆನ್‌ಲೈನ್ ಮೂಲಕ ಸಲ್ಲಿಸುವ ಮೊದಲು ಕೊಟ್ಟಿರುವ ಎಲ್ಲಾ ಸೂಚನೆಗಳನ್ನು ಗಮನವಿಟ್ಟು ಓದಿಕೊಳ್ಳಬೇಕು ಮತ್ತು ತಪ್ಪಾಗದಂತೆ ನೋಡಿಕೊಳ್ಳುವುದು, ಸರಿಯಾದ ಮಾಹಿತಿ ನೀಡದೇ ಇರುವ ಮತ್ತು ಅಪೂರ್ಣ ಮಾಹಿತಿಯುಳ್ಳ ಅರ್ಜಿಯನ್ನು/ ಅರ್ಜಿಗಳನ್ನು ಯಾವುದೇ ಸೂಚನೆ ನೀಡದೆ ತಿರಸ್ಕರಿಸಲಾಗುವುದು.

2) ಅಭ್ಯರ್ಥಿಗಳು ಚಾಲ್ತಿಯಲ್ಲಿರುವ ಮೊಬೈಲ್ ಸಂಖ್ಯೆಯನ್ನು ಹಾಗೂ ಇ-ಮೇಲ್ ಐಡಿಯನ್ನು ಕಡ್ಡಾಯವಾಗಿ ನಮೂದಿಸುವುದು, ಒಂದು ವೇಳೆ ತಾಂತ್ರಿಕ ತೊಂದರೆಯಿಂದ ಎಸ್.ಎಂ.ಎಸ್ (SMS) ಅಥವಾ ಇ-ಮೇಲ್ (E-mail) ಮುಖಾಂತರ ಅಭ್ಯರ್ಥಿಗಳಿಗೆ ಸಂದೇಶ ತಲುಪದಿದ್ದಲ್ಲಿ ಈ ಪ್ರಾಧಿಕಾರವು ಹೊಣೆಯಾಗುವುದಿಲ್ಲ.

3) ಅರ್ಹ ಅಭ್ಯರ್ಥಿಗಳಿಗೆ SMS/E-Mail ಮುಖಾಂತರ ಮಾಹಿತಿ ನೀಡಲಾಗುವುದು. ಸಂದರ್ಶನಕ್ಕೆ/ ಅರ್ಹತಾ ಪರೀಕ್ಷೆಗೆ ಅರ್ಹ ಅಭ್ಯರ್ಥಿಗಳ ಪಟ್ಟಿಯನ್ನು ನ್ಯಾಯಾಲಯದ ವೆಬ್‌ಸೈಟ್‌ನಲ್ಲಿ ಪ್ರಕಟಿಸಲಾಗುವುದು. ಸದರಿ ಪಟ್ಟಿಯ ಆಧಾರದ ಮೇಲೆ ಅಭ್ಯರ್ಥಿಗಳನ್ನು ಸಂದರ್ಶನಕ್ಕೆ/ ಅರ್ಹತಾ ಪರೀಕ್ಷೆಗೆ ಕರೆಯಲಾಗುವುದು.

4) ಅಭ್ಯರ್ಥಿಗಳು ವಿವಿಧ ವರ್ಗಗಳಿಗೆ ಒಂದೇ ಅರ್ಜಿಯನ್ನು ಸಲ್ಲಿಸಬೇಕು. ಸದರಿ ಅರ್ಜಿಯಲ್ಲಿಯೇ ತಾವು ಕ್ಲೇಮು ಮಾಡುವ ತಮ್ಮ ಮೀಸಲಾತಿಗಳ ಬಗ್ಗೆ ನಮೂದಿಸತಕ್ಕದ್ದು.

5) ಅಭ್ಯರ್ಥಿಯು ಭಾವಚಿತ್ರ ಮತ್ತು ಸಹಿಯನ್ನು SCAN ಮಾಡಿ ಅಪ್‌ಲೋಡ್ ಮಾಡಲು ಈ ಕೆಳಕಂಡ ನಿರ್ದೇಶನಗಳನ್ನು ಪಾಲಿಸತಕ್ಕದ್ದು.

6) ಅ) ಬಣ್ಣದ ಭಾವಚಿತ್ರವು ಇತ್ತೀಚಿನದ್ದಾಗಿದ್ದು ಅಳತೆಯಲ್ಲಿ 5 cm ಉದ್ದ x 3.6 cm ಅಗಲವುಳ್ಳದ್ದಾಗಿರಬೇಕು ಮತ್ತು 50kb ಅಳತೆಯದ್ದಾಗಿರಬೇಕು ಹಾಗೂ ಅದು .jpg ನಮೂನೆಯಲ್ಲಿರಬೇಕು, ಭಾವಚಿತ್ರದ ಹಿಂಬದಿಯು ಬಿಳಿ ಬಣ್ಣದ್ದಾಗಿರಬೇಕು.

ಆ) ಭಾವಚಿತ್ರವನ್ನು SCAN ಮಾಡಿ ಅರ್ಜಿಗೆ ಅಪ್‌ಲೋಡ್ ಮಾಡಬೇಕು (ಯಾವುದೇ ಕಾರಣಕ್ಕೂ ಭಾವಚಿತ್ರದ ಮೇಲೆ ಸಹಿ ಮಾಡಬಾರದು).

ಇ) ಅಭ್ಯರ್ಥಿಯು ಕಪ್ಪು/ನೀಲಿ ಬಾಲ್-ಪಾಯಿಂಟ್ ಪೆನ್ನಿನಲ್ಲಿ ಬಿಳಿ ಹಾಳೆಯ ಮೇಲೆ ಸಹಿ ಮಾಡಿ (2.5 cm ಉದ್ದ x 7.5 cm ಅಗಲವುಳ್ಳದ್ದಾಗಿರಬೇಕು ಮತ್ತು ಅಳತೆಯದ್ದಾಗಿರಬೇಕು, 25kb ಅಳತೆಯದ್ದಾಗಿರಬೇಕು ಹಾಗೂ ಅದು .jpg ನಮೂನೆಯಲ್ಲಿರಬೇಕು) ಅಪಲೋಡ್ ಮಾಡಬೇಕು.

7) ತದನಂತರ ಅಭ್ಯರ್ಥಿಯು ON-LINE ಅರ್ಜಿಯಲ್ಲಿ ಕೋರಲಾದ ಎಲ್ಲಾ ಮಾಹಿತಿಗಳನ್ನು ಭರ್ತಿ ಮಾಡಿ ನಿಗದಿತ ಶುಲ್ಕ ಪಾವತಿಸಲು ಅರ್ಜಿಯಲ್ಲಿ ತಿಳಿಸಿರುವಂತೆ ಕ್ರಮ ಕೈಗೊಳ್ಳುವುದು. ತದನಂತರ ಅರ್ಜಿಯನ್ನು ಹಾಗೂ ಶುಲ್ಕವನ್ನು ತುಂಬಿದ ಪ್ರತಿಯನ್ನು ಡೌನ್‌ಲೋಡ್ ಮಾಡಿಕೊಂಡು ನೇಮಕಾತಿ ಪ್ರಕ್ರಿಯೆ ಮುಗಿಯುವವರೆಗೂ ತಮ್ಮ ಹತ್ತಿರ ಇಟ್ಟುಕೊಳ್ಳತಕ್ಕದ್ದು ಹಾಗೂ ಅರ್ಹತಾ ಪರೀಕ್ಷೆ/ಸಂದರ್ಶನದ ಸಮಯದಲ್ಲಿ ಹಾಜರುಪಡಿಸತಕ್ಕದ್ದು.

8) ಅಭ್ಯರ್ಥಿಗಳು ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದವರೆಗೂ ವಿಳಂಬ ಮಾಡದೇ ಮುಂಚಿತವಾಗಿ ಅರ್ಜಿಗಳನ್ನು ಸಲ್ಲಿಸತಕ್ಕದ್ದು ಮತ್ತು ನಿಗದಿತ ಶುಲ್ಕವನ್ನು ಜಾಗರೂಕತೆಯಿಂದ ಪಾವತಿಸತಕ್ಕದ್ದು. ಒಮ್ಮೆ ಶುಲ್ಕವನ್ನು ತಪ್ಪಾಗಿ ಪಾವತಿಸಿದ (ಕಡಿಮೆ ಅಥವಾ ಹೆಚ್ಚುವರಿಯಾಗಿ ಪಾವತಿಸಿದ) ಶುಲ್ಕವನ್ನು ಯಾವುದೇ ಸಂದರ್ಭದಲ್ಲಿ ಹಿಂತಿರುಗಿಸಲಾಗುವುದಿಲ್ಲ.

9) ನ್ಯಾಯಾಲಯ ಅಧಿಕೃತ ವೆಬ್‌ಸೈಟ್ ನಲ್ಲಿ ಅರ್ಜಿಯನ್ನು ಆನ್‌ಲೈನ್ ಮೂಲಕ ನೋಂದಾಯಿಸಲು/ ಸಲ್ಲಿಸಲು ದಿನಾಂಕಃ 14.04.2024 ರ ರಾತ್ರಿ 11.59 ರವರೆಗೆ ಅವಕಾಶವಿರುತ್ತದೆ. ಶುಲ್ಕವನ್ನು Online Payment through Net Banking / Credit Card / Debit Card / UPI ID / QR code ಮುಖಾಂತರ ಪಾವತಿಸಲು ದಿನಾಂಕಃ 15.04.2024 ರ ರಾತ್ರಿ 11.59 ಕೊನೆಯ ದಿನಾಂಕವಾಗಿರುತ್ತದೆ.

10) ಅರ್ಜಿಗಳನ್ನು Online ಹೊರತುಪಡಿಸಿ ಇತರೆ ಯಾವುದೇ ವಿಧಾನದಲ್ಲಿ ಸಲ್ಲಿಸಿದ ಅರ್ಜಿಗಳನ್ನು ಪರಿಗಣಿಸಲಾಗುವುದಿಲ್ಲ.

## ಮೀಸಲಾತಿ ಕೋರುವ ಅಭ್ಯರ್ಥಿಗಳುಃ

**ಅ) ಜಾತಿ ಮೀಸಲಾತಿ ಕೋರುವ ಅಭ್ಯರ್ಥಿಗಳುಃ**

ಜಾತಿ ಮೀಸಲಾತಿಯನ್ನು ಕೋರಬಯಸುವ ಅಭ್ಯರ್ಥಿಗಳು ಈ ಕೆಳಗೆ ನಮೂದಿಸಿರುವ ನಮೂನೆಗಳಲ್ಲಿಯೇ ಮೀಸಲಾತಿ ಪ್ರಮಾಣ ಪತ್ರಗಳನ್ನು ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದೊಳಗೆ ಪಡೆದಿಟ್ಟುಕೊಂಡಿರತಕ್ಕದ್ದು:-

ಅ) ಪರಿಶಿಷ್ಟ ಜಾತಿ ಮತ್ತು ಪರಿಶಿಷ್ಟ ಪಂಗಡಕ್ಕೆ ಸೇರಿದ ಅಭ್ಯರ್ಥಿಗಳು:- **ನಮೂನೆ 'ಡಿ'**

ಆ) ಪ್ರವರ್ಗ-೧ ಕ್ಕೆ ಸೇರಿದ ಅಭ್ಯರ್ಥಿಗಳು:- **ನಮೂನೆ 'ಇ'**

ಇ) ಪ್ರವರ್ಗ-IIA, IIB, IIIA ಮತ್ತು IIIB ಮೀಸಲಾತಿಗೆ ಸೇರಿದ ಅಭ್ಯರ್ಥಿಗಳು:- **ನಮೂನೆ 'ಎಫ್'**

ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದಂದು ಚಾಲ್ತಿಯಲ್ಲಿರುವ ಮೀಸಲಾತಿ ಪ್ರಮಾಣ ಪತ್ರವನ್ನು ಸಂಬಂಧಿತ ತಹಸೀಲ್ದಾರ್ ರವರಿಂದ ಅಂದರೆ ತಹಶೀಲ್ದಾರ್‌ರವರ ಸಹಿ ಮತ್ತು ಮೊಹರು ಅಥವಾ ಬಾರ್‌ಕೋಡ್, ಹಾಲೋಗ್ರಾಮ್ ಮತ್ತು ವಾಟರ್ ಮಾರ್ಕ್ನೊಂದಿಗೆ ಪಡೆದಿಟ್ಟುಕೊಂಡಿರತಕ್ಕದ್ದು. ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡ ಮತ್ತು ಪ್ರವರ್ಗ-1 ರ ಮೀಸಲಾತಿ ಪ್ರಮಾಣ ಪತ್ರಗಳು ರದ್ದಾಗುವವರೆಗೂ ಚಾಲ್ತಿಯಲ್ಲಿರುವುದರಿಂದ ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದೊಳಗೆ ನಿಗದಿಪಡಿಸಿದ ನಮೂನೆಯಲ್ಲಿ ಪಡೆದಿಟ್ಟುಕೊಂಡಿರತಕ್ಕದ್ದು. ಇತರೆ ಹಿಂದುಳಿದ ವರ್ಗಗಳ ಪ್ರವರ್ಗ-IIA, ಪ್ರವರ್ಗ-IIB, ಪ್ರವರ್ಗ- IIIA ಮತ್ತು ಪ್ರವರ್ಗ- IIIB ವರ್ಗದ ಮೀಸಲಾತಿ ಪ್ರಮಾಣ ಪತ್ರಗಳು 5 ವರ್ಷ ಚಾಲ್ತಿಯಲ್ಲಿರುತ್ತವೆ. **ಅಭ್ಯರ್ಥಿಗಳು ಪಡೆದಿರುವ ಪ್ರಮಾಣ ಪತ್ರವು ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದಂದು ಚಾಲ್ತಿಯಲ್ಲಿರಬೇಕು.** ಮೂಲ ದಾಖಲಾತಿ ಪರಿಶೀಲನೆಗೆ ಅರ್ಹರಾದಾಗ ಕೊನೆಯ ದಿನಾಂಕದಂದು ಚಾಲ್ತಿಯಲ್ಲಿರುವ ಮೀಸಲಾತಿ ಪ್ರಮಾಣ ಪತ್ರದ ಮೂಲ ಪ್ರತಿಯನ್ನು ಪರಿಶೀಲನೆಗೆ ತಪ್ಪದೇ ಹಾಜರುಪಡಿಸತಕ್ಕದ್ದು, ತಪ್ಪಿದಲ್ಲಿ ಅಂತಹ ಅಭ್ಯರ್ಥಿಗಳ ಮೀಸಲಾತಿಯನ್ನು ರದ್ದುಪಡಿಸಿ ಅವರ ಅಭ್ಯರ್ಥಿತನವನ್ನು ಸಾಮಾನ್ಯ ಅರ್ಹತೆಯಡಿಯಲ್ಲಿ ಅರ್ಹರಾದಲ್ಲಿ ಮಾತ್ರ ಪರಿಗಣಿಸಲಾಗುವುದು. ಮೇಲಿನ ನಮೂನೆಗಳನ್ನು ಹೊರತುಪಡಿಸಿ ಇತರೆ ಯಾವುದೇ ನಮೂನೆಗಳಲ್ಲಿ ಪಡೆಯಲಾದ ಮೀಸಲಾತಿ ಪ್ರಮಾಣ ಪತ್ರಗಳನ್ನು ತಿರಸ್ಕರಿಸಲಾಗುವುದು.

**ಆ) ಗ್ರಾಮೀಣ ಮೀಸಲಾತಿ ಕೋರುವ ಅಭ್ಯರ್ಥಿಗಳುಃ**

ಸರ್ಕಾರಿ ಅಧಿಸೂಚನೆ ಸಂಖ್ಯೆ: 59 ಶಾಸನ 2000, ದಿನಾಂಕ 06.01.2001 ರನ್ವಯ ಗ್ರಾಮೀಣ ಮೀಸಲಾತಿಯಡಿ ಅರ್ಜಿ ಸಲ್ಲಿಸುವಂತಹ ಅಭ್ಯರ್ಥಿಗಳು ನಿಯಮಗಳ ರೀತ್ಯಾ 1 ರಿಂದ 10 ನೇ ತರಗತಿಯವರೆಗೆ ಗ್ರಾಮೀಣ ಮೀಸಲಾತಿಗೆ ಒಳಪಡುವ ಪ್ರದೇಶಗಳಲ್ಲಿ ವ್ಯಾಸಂಗ ಮಾಡಿ ಉತ್ತೀರ್ಣರಾದಲ್ಲಿ ಮಾತ್ರ ಈ ಮೀಸಲಾತಿಯನ್ನು ಪಡೆಯಲು ಅರ್ಹರು.

ಗ್ರಾಮೀಣ ಅಭ್ಯರ್ಥಿಗಳಿಗೆಂದು ಮೀಸಲಿರಿಸಿದ ಹುದ್ದೆಗಳಿಗೆ ಅರ್ಜಿ ಸಲ್ಲಿಸುವ ಸಾಮಾನ್ಯ ಅರ್ಹತೆಯ ಅಭ್ಯರ್ಥಿಗಳು ಸರ್ಕಾರಿ ಆದೇಶ ಸಂಖ್ಯೆಃ ಸಿಆಸುಇ 08 ಸೆನೆನಿ 2001 ದಿನಾಂಕ 13.02.2001 ರನ್ವಯ ನಮೂನೆ-2 ನ್ನು ಸಂಬಂಧಪಟ್ಟ ಶಾಲೆಯ ಮುಖ್ಯೋಪಾಧ್ಯಾಯರ ಸಹಿ ಮತ್ತು ಕ್ಷೇತ್ರ ಶಿಕ್ಷಣಾಧಿಕಾರಿಯವರ ಮೇಲು ರುಜುವಿನೊಂದಿಗೆ ಹಾಗೂ ಈ ಪ್ರಮಾಣ ಪತ್ರವಲ್ಲದೇ ಮೇಲುಸ್ಥರಕ್ಕೆ ಸೇರಿಲ್ಲದಿರುವ ಬಗ್ಗೆ ನಮೂನೆ-1 ರಲ್ಲಿ ಪ್ರಮಾಣ ಪತ್ರವನ್ನು ಕಡ್ಡಾಯವಾಗಿ ಸಂಬಂಧಿತ ತಹಶೀಲ್ದಾರರವರಿಂದ ನಿಗದಿಪಡಿಸಿದ ಕೊನೆಯ ದಿನಾಂಕದೊಳಗೆ ಪಡೆದಿಟ್ಟುಕೊಂಡಿರತಕ್ಕದ್ದು.

ಅಂತೆಯೇ ಗ್ರಾಮೀಣ ಮೀಸಲಾತಿ ಕೋರುವ ಪರಿಶಿಷ್ಟಜಾತಿ, ಪರಿಶಿಷ್ಟ ಪಂಗಡ, ಪ್ರವರ್ಗ-1, ಪ್ರವರ್ಗ-IIA, ಪ್ರವರ್ಗ-IIB, ಪ್ರವರ್ಗ- IIIA ಮತ್ತು ಪ್ರವರ್ಗ- IIIB ಮೀಸಲಾತಿಗೆ ಸೇರಿದ ಅಭ್ಯರ್ಥಿಗಳು ಕಡ್ಡಾಯವಾಗಿ ಗ್ರಾಮೀಣ ಮೀಸಲಾತಿಯ ಪ್ರಮಾಣ ಪತ್ರವನ್ನು ಸರ್ಕಾರಿ ಆದೇಶ ಸಂಖ್ಯೆಃ ಸಿಆಸುಇ/96/ಸೇನನಿ/2005, ದಿನಾಂಕಃ 10.08.2005 ನಮೂನೆ-2 ರಲ್ಲಿ ನಿಗದಿಪಡಿಸಿದ ಕೊನೆಯ ದಿನಾಂಕದೊಳಗೆ ಸಂಬಂಧಪಟ್ಟ ಶಾಲೆಯ ಮುಖ್ಯೋಪಾಧ್ಯಾಯರ ಸಹಿ ಮತ್ತು ಕ್ಷೇತ್ರ ಶಿಕ್ಷಣಾಧಿಕಾರಿಯವರ ಮೇಲು ರುಜುವಿನೊಂದಿಗೆ ಪಡೆದಿಟ್ಟುಕೊಂಡಿರತಕ್ಕದ್ದು.

ಮೂಲ ದಾಖಲಾತಿ ಪರಿಶೀಲನೆಗೆ ಅರ್ಹರಾದಾಗ ಅರ್ಜಿಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದೊಳಗೆ ಚಾಲ್ತಿಯಲ್ಲಿರುವ ಮೀಸಲಾತಿ ಪ್ರಮಾಣ ಪತ್ರದ ಮೂಲ ಪ್ರತಿಯನ್ನು ಪರಿಶೀಲನೆಗೆ ತಪ್ಪದೇ ಹಾಜರುಪಡಿಸತಕ್ಕದ್ದು, ತಪ್ಪಿದಲ್ಲಿ ಅಂತಹ ಅಭ್ಯರ್ಥಿಗಳ ಗ್ರಾಮೀಣ ಮೀಸಲಾತಿಯನ್ನು ರದ್ದುಪಡಿಸಲಾಗುವುದು. (ಅಭ್ಯರ್ಥಿಗಳ ನೇರ ಮೀಸಲಾತಿ ಪ್ರಮಾಣ ಪತ್ರಗಳು ತಿರಸ್ಕೃತಗೊಂಡಲ್ಲಿ ಅಂತಹವರು ಗ್ರಾಮೀಣ ಮೀಸಲಾತಿಗೆ ಸಹ ಅನರ್ಹರಾಗುತ್ತಾರೆ)

**ಇ) ಕನ್ನಡ ಮಾಧ್ಯಮ ಮೀಸಲಾತಿ ಕೋರುವ ಅಭ್ಯರ್ಥಿಗಳುಃ**

ಸರ್ಕಾರಿ ಅಧಿಸೂಚನೆ ಸಂಖ್ಯೆ ಸಿಆಸುಇ 71 ಸೆನೆನಿ 2001 ದಿನಾಂಕ 24.10.2002 ರನ್ವಯ ಕನ್ನಡ ಮಾಧ್ಯಮದ ಅಭ್ಯರ್ಥಿಗಳಿಗೆಂದು ಮೀಸಲಿರಿಸಿದ ಹುದ್ದೆಗಳಿಗೆ ಅರ್ಜಿ ಸಲ್ಲಿಸುವಂತಹ ಅಭ್ಯರ್ಥಿಗಳು 1 ನೇ ತರಗತಿಯಿಂದ 10 ನೇ ತರಗತಿಯವರೆಗೆ ಕನ್ನಡ ಮಾಧ್ಯಮದಲ್ಲಿ ವ್ಯಾಸಂಗ ಮಾಡಿರುವ ಬಗ್ಗೆ ಸಂಬಂಧಪಟ್ಟ ಶಾಲೆಯ ಮುಖ್ಯೋಪಾಧ್ಯಾಯರ ಸಹಿ ಹಾಗೂ ಮೊಹರಿನೊಂದಿಗೆ ಪ್ರಮಾಣಪತ್ರವನ್ನು ಅರ್ಜಿ ಸಲ್ಲಿಸಲು ನಿಗದಿಪಡಿಸಿದ ಕೊನೆಯ ದಿನಾಂಕದೊಳಗೆ ಪಡೆದಿಟ್ಟುಕೊಂಡಿರತಕ್ಕದ್ದು ಹಾಗೂ ಮೂಲ ದಾಖಲಾತಿ ಪರಿಶೀಲನೆಗೆ ಅರ್ಹರಾದಾಗ ಇದೇ ಪ್ರಮಾಣ ಪತ್ರಗಳ ಮೂಲ ಪ್ರತಿಗಳನ್ನು ಪರಿಶೀಲನೆಗೆ ತಪ್ಪದೇ ಹಾಜರುಪಡಿಸತಕ್ಕದ್ದು. ತಪ್ಪಿದಲ್ಲಿ ಅಂತಹ ಅಭ್ಯರ್ಥಿಗಳ ಕ.ಮಾ.ಅ. ಮೀಸಲಾತಿಯನ್ನು ರದ್ದುಪಡಿಸಲಾಗುವುದು.

**ಈ) ಅಂಗವಿಕಲ ಮೀಸಲಾತಿಯನ್ನು ಕೋರುವ ಅಭ್ಯರ್ಥಿಗಳು :**

ಸರ್ಕಾರದ ಅಧಿಸೂಚನೆ ಸಂಖ್ಯೆ: ಡಿಪಿಎಆರ್ 50 ಎಸ್ಆರ್ಆರ್ 2000 ದಿನಾಂಕ-03.09.2005 ರಂತೆ Group-C ಹಾಗೂ Group-D ಹುದ್ದೆಗಳಲ್ಲಿ ಶೇಕಡ 5 ರಷ್ಟು ಹುದ್ದೆಗಳನ್ನು ಅಂಗವಿಕಲರಿಗೆ ಮೀಸಲಾತಿ ಕಲ್ಪಿಸಿದ್ದು, ಇದರನ್ವಯ ಶೇಕಡ 40 ಕ್ಕಿಂತ ಕಡಿಮೆ ಇಲ್ಲದಂತಹ ನ್ಯೂನತೆಯುಳ್ಳ ಅಭ್ಯರ್ಥಿಗಳು ಮಾತ್ರ ಈ ಮೀಸಲಾತಿಯನ್ನು ಕೋರಲು ಅರ್ಹರು. ಸರ್ಕಾರದ ಅಧಿಕೃತ ಜ್ಞಾಪನ ಸಂಖ್ಯೆ ಸಿಆಸುಇ 115 ಸೆನೆನಿ 2005 ದಿನಾಂಕ 19.11.2005 ರಲ್ಲಿ ನಿಗದಿಪಡಿಸಿರುವ ನಮೂನೆಯಲ್ಲಿ ಅಂಗವಿಕಲತೆ ಬಗ್ಗೆ ಸರ್ಕಾರದ ಆದೇಶ ಸಂಖ್ಯೆ: ಮಮಇ 65 ಪಿಹೆಚ್‌ಪಿ 2010 ದಿನಾಂಕ 21.09.2011 ರಂತೆ ಪ್ರಾಥಮಿಕ ಆರೋಗ್ಯ ಕೇಂದ್ರದಲ್ಲಿಯ ವೈದ್ಯಕೀಯ ಪ್ರಾಧಿಕಾರ/ತಾಲ್ಲೂಕು ಮಟ್ಟದ ವೈದ್ಯಕೀಯ ಪ್ರಾಧಿಕಾರ / ಜಿಲ್ಲಾಮಟ್ಟದ ವೈದ್ಯಕೀಯ ಪ್ರಾಧಿಕಾರ/ ಬೆಂಗಳೂರು ವೈದ್ಯಕೀಯ ಪ್ರಾಧಿಕಾರ ಇವರಿಂದ ಪ್ರಮಾಣ ಪತ್ರವನ್ನು ನಿಗದಿಪಡಿಸಿದ ಕೊನೆಯ ದಿನಾಂಕದೊಳಗೆ ಪಡೆದಿಟ್ಟುಕೊಂಡಿರತಕ್ಕದ್ದು. ಮೂಲ ದಾಖಲಾತಿಗಳ ಪರಿಶೀಲನೆಗೆ ಅರ್ಹರಾದಾಗ ಈ ಪ್ರಮಾಣ ಪತ್ರದ ಮೂಲ ಪ್ರತಿಯನ್ನು ಪರಿಶೀಲನೆಗೆ ತಪ್ಪದೇ ಹಾಜರುಪಡಿಸತಕ್ಕದ್ದು, ತಪ್ಪಿದಲ್ಲಿ ಅಂತಹ ಅಭ್ಯರ್ಥಿಗಳ ಅಂಗವಿಕಲ ಮೀಸಲಾತಿಯನ್ನು ರದ್ದುಪಡಿಸಲಾಗುವುದು.

**ಉ) ಮಾಜಿ ಸೈನಿಕ ಮೀಸಲಾತಿಯನ್ನು ಕೋರುವ ಅಭ್ಯರ್ಥಿಗಳುಃ**

ಸರ್ಕಾರದ ಅಧಿಸೂಚನೆ ಸಂಖ್ಯೆ ಡಿಪಿಎಆರ್ 13 ಎಸ್ಆರ್ಆರ್ 92 ದಿನಾಂಕ 01.04.1992 ಮತ್ತು ಅಧಿಸೂಚನೆ ಸಂಖ್ಯೆ ಡಿಪಿಎಆರ್ 28 ಎಸ್ಆರ್ಆರ್ 95 ದಿನಾಂಕ 21.10.1995 ರನ್ವಯ ನೇರ ನೇಮಕಾತಿಗಳಲ್ಲಿ ಶೇಕಡ 10 ರಷ್ಟು ಹುದ್ದೆಗಳನ್ನು ಮಾಜಿ ಸೈನಿಕರಿಗೆ ಮೀಸಲಾತಿ ಕಲ್ಪಿಸಲಾಗಿದೆ. ಮಾಜಿ ಸೈನಿಕ ಮೀಸಲಾತಿಯನ್ನು ಕೋರುವ ಅಭ್ಯರ್ಥಿಗಳು ಮಿಲಿಟರಿ ಸೇವೆಯಿಂದ ಬಿಡುಗಡೆ ಮಾಡಲಾದ ಅಥವಾ ವಿಮುಕ್ತಿಗೊಳಿಸಿದ ಪ್ರಮಾಣ ಪತ್ರವನ್ನು ಅರ್ಜಿ ಸಲ್ಲಿಸುವ ಕಡೆಯ ದಿನಾಂಕದೊಳಗೆ ಹೊಂದಿರತಕ್ಕದ್ದು ಮತ್ತು ಮೂಲ ದಾಖಲಾತಿಗಳ ಪರಿಶೀಲನೆಗೆ ಅರ್ಹರಾದಾಗ ಈ ಪ್ರಮಾಣ ಪತ್ರದ ಮೂಲ ಪ್ರತಿಯನ್ನು ಪರಿಶೀಲನೆಗೆ ತಪ್ಪದೇ ಹಾಜರುಪಡಿಸತಕ್ಕದ್ದು, ತಪ್ಪಿದಲ್ಲಿ ಅಂತಹ ಅಭ್ಯರ್ಥಿಗಳ ಮಾಜಿ ಸೈನಿಕ ಮೀಸಲಾತಿಯನ್ನು ರದ್ದುಪಡಿಸಲಾಗುವುದು.

**ಇತರೆ ಸೂಚನೆಗಳುಃ**

1) ಸೇವಾನಿರತ ಅಭ್ಯರ್ಥಿಗಳು ಮೇಲೆ ನಮೂದಿಸಿದ ಹುದ್ದೆಗೆ ಆಯ್ಕೆಯಾದಲ್ಲಿ, DPAR 19 SRR 2020 ದಿನಾಂಕಃ 12.10.2020 ರನ್ವಯ ಆಯ್ಕೆ ಪಟ್ಟಿಯು ಪ್ರಕಟವಾದ 30 ದಿನಗಳೊಳಗೆ ಸಂಬಂಧಪಟ್ಟ ಪ್ರಾಧಿಕಾರದಿಂದ ನಿರಾಕ್ಷೇಪಣಾ ಪ್ರಮಾಣ ಪತ್ರವನ್ನು ಪಡೆದುಕೊಂಡು ಹಾಜರುಪಡಿಸತಕ್ಕದ್ದು.

2) ಅಭ್ಯರ್ಥಿಗಳು ಅರ್ಜಿಯನ್ನು ಸಲ್ಲಿಸಲು ನಿಗದಿಪಡಿಸಿದ ದಿನಾಂಕದಿಂದ 06 ತಿಂಗಳೊಳಗೆ ಇಬ್ಬರು ಗೌರವಾನ್ವಿತ ವ್ಯಕ್ತಿಗಳಿಂದ ಹಾಗೂ ಕೊನೆಯದಾಗಿ ವ್ಯಾಸಂಗ ಮಾಡಿದ ಶೈಕ್ಷಣಿಕ ಸಂಸ್ಥೆಯಿಂದ ನಡತೆ ಪ್ರಮಾಣ ಪತ್ರಗಳನ್ನು ಪಡೆದಿರತಕ್ಕದ್ದು.

3) ಆಯ್ಕೆಯಾದ ಅಭ್ಯರ್ಥಿಗಳು ಕರ್ನಾಟಕ ಸೇವಾ ನಿಯಮ (ಪರಿವೀಕ್ಷಣೆ ನಿಯಮಗಳು 1977)ರ ಪ್ರಕಾರ ಕರ್ತವ್ಯಕ್ಕೆ ಹಾಜರಾದ ದಿನಾಂಕದಿಂದ ಎರಡು ವರ್ಷಗಳ ಕಾಲ ಪರಿವೀಕ್ಷಣಾ ಅವಧಿಯಲ್ಲಿರುತ್ತಾರೆ. ಈ ಅವಧಿಯಲ್ಲಿ ಅಭ್ಯರ್ಥಿಗಳು ತಮ್ಮ ಹುದ್ದೆಗೆ ನಿಗದಿಪಡಿಸಿದ ಇಲಾಖಾ ಪರೀಕ್ಷೆಗಳಲ್ಲಿ ಮತ್ತು ಕನ್ನಡ ಭಾಷಾ ಪರೀಕ್ಷೆಯಲ್ಲಿ ಉತ್ತೀರ್ಣರಾಗಬೇಕು.
(ಬೆರಳಚ್ಚುಗಾರರು, ಆದೇಶ ಜಾರಿಕಾರರು ಹಾಗೂ ಜವಾನ ಹುದ್ದೆಗೆ ಯಾವುದೇ ಇಲಾಖಾ ಪರೀಕ್ಷೆಗಳು ಕಡ್ಡಾಯವಿರುವುದಿಲ್ಲ)

4) ಆಯ್ಕೆಯಾದ ಅಭ್ಯರ್ಥಿಗಳಿಗೆ ಪಿಂಚಣಿ ಸೌಲಭ್ಯವು ಸರ್ಕಾರದ ಆದೇಶ ಸಂಖ್ಯೆಃ ಎಫ್.ಡಿ (ಎಸ್.ಪಿ.ಎಲ್) 04/ಪಿಇಟಿ/05, ದಿನಾಂಕಃ 31.01.2006 ರಂತೆ ಅನ್ವಯಿಸುವುದು.

5) ಶೀಘ್ರಲಿಪಿಗಾರರು ಹಾಗೂ ಬೆರಳಚ್ಚುಗಾರರ ಹುದ್ದೆಗಳಿಗೆ ಆಯ್ಕೆಯಾದ ಅಭ್ಯರ್ಥಿಗಳು ಕರ್ತವ್ಯಕ್ಕೆ ಹಾಜರಾದ ಮೂರು ತಿಂಗಳ ಒಳಗೆ ಸರ್ಕಾರವು ಅನುಮೋದಿಸಿದ ಏಜೆನ್ಸಿಯಲ್ಲಿ ಕಂಪ್ಯೂಟರ್ ಸಾಕ್ಷರತಾ ಪರೀಕ್ಷೆಯನ್ನು ಪಾಸು ಮಾಡತಕ್ಕದ್ದು.

6) ಅರ್ಹತಾ ಪರೀಕ್ಷೆಗೆ ಹಾಗೂ ಸಂದರ್ಶನಕ್ಕೆ ಆಯ್ಕೆಯಾದ ಅಭ್ಯರ್ಥಿಗಳು ತಮ್ಮ ಸ್ವಂತ ಖರ್ಚಿನಲ್ಲಿಯೇ ಸಂದರ್ಶನಕ್ಕೆ ಹಾಜರಾಗಬೇಕು ಹಾಗೂ ಅರ್ಹತಾ ಪರೀಕ್ಷೆಗೆ/ಸಂದರ್ಶನಕ್ಕೆ ಮಾಹಿತಿಯು ಬರದಿರುವ ಅಭ್ಯರ್ಥಿಗಳು ಅನರ್ಹರೆಂದು ಭಾವಿಸತಕ್ಕದ್ದು.

7) ಆಯ್ಕೆಯ ಸಂಬಂಧವಾಗಿ ಸಂದರ್ಶನಕ್ಕೆ ಅನರ್ಹರಾದ ಅಭ್ಯರ್ಥಿಗಳು ಈ ಕಛೇರಿಯೊಂದಿಗೆ ಯಾವುದೇ ಪತ್ರ ವ್ಯವಹಾರವನ್ನಾಗಲಿ, ಇ-ಮೇಲ್ ಆಗಲಿ, ಖುದ್ದಾಗಿ ಬರುವುದಾಗಲಿ ಅಥವಾ ದೂರವಾಣಿ ಕರೆಗಳನ್ನು ನಡೆಸಲು/ಮಾಡಲು ಅವಕಾಶವಿರುವುದಿಲ್ಲ.

8) ಅಭ್ಯರ್ಥಿಯು ನಕಲಿ ಅಭ್ಯರ್ಥಿಯಾಗಿರುವನೆಂದು ಅಥವಾ ಖೋಟಾ ದಸ್ತಾವೇಜು ಅಥವಾ ತಿದ್ದಲಾದ ದಸ್ತಾವೇಜುಗಳನ್ನು ಸಲ್ಲಿಸಿರುವನೆಂದು ಅಥವಾ ತಪ್ಪು ಅಥವಾ ಸುಳ್ಳು ಹೇಳಿಕೆ ನೀಡಿರುವನೆಂದು ಅಥವಾ ವಾಸ್ತವಿಕ ಮಾಹಿತಿಯನ್ನು ಮರೆಮಾಚಿರುವನೆಂದು ಅಥವಾ ನೇಮಕಾತಿ ಉದ್ದೇಶಗಳಿಗೆ ನಡೆಸಲಾದ ಪರಿಶೀಲನೆ ಪ್ರಕ್ರಿಯೆಗಳ ಸಂದರ್ಭಗಳಲ್ಲಿ ಅನುಚಿತ ಮಾರ್ಗವನ್ನು ಅನುಸರಿಸುತ್ತಿರುವನೆಂದು ಅಥವಾ ಅನುಸರಿಸಲು ಪ್ರಯತ್ನಿಸಿರುವನೆಂದು ಅಥವಾ ಅವರ ನೇಮಕಾತಿಯ ಸಂಬಂಧದಲ್ಲಿ ಯಾವುದೇ ಇತರೇ ಅಕ್ರಮ ಮತ್ತು ಅನುಚಿತ ಮಾರ್ಗವನ್ನು ಅವಲಂಭಿಸಿರುವನೆಂದು ಕಂಡುಬಂದಲ್ಲಿ ಅವನು/ಅವಳು ಸ್ವತಃ ಕ್ರಿಮಿನಲ್ ವ್ಯವಹರಣೆಗಳಿಗೆ ಮತ್ತು ಶಿಸ್ತು ಕ್ರಮಕ್ಕೆ ಒಳಪಡುವುದಲ್ಲದೇ, ಹುದ್ದೆಯ ಆಯ್ಕೆಯಿಂದ ಅಭ್ಯರ್ಥಿತ್ವವನ್ನು ರದ್ದುಪಡಿಸಲಾಗುವುದು.

9) ಈ ಅಧಿಸೂಚನೆಯ ಎಲ್ಲಾ ಪ್ರಕ್ರಿಯೆಗಳನ್ನು ಕಾಲ-ಕಾಲಕ್ಕೆ ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಲಯ, ಬೆಳಗಾವಿಯ ಅಧಿಕೃತ ವೆಬ್-ಸೈಟ್‌ನಲ್ಲಿ ಹಾಗೂ ಸೂಚನಾ ಫಲಕದ (Notice Board)ಮೇಲೆ ಪ್ರಕಟಿಸಲಾಗುವುದು.

**Sd/-**
(ಶ್ರೀಮತಿ. ಎಲ್. ವಿಜಯಲಕ್ಷ್ಮೀದೇವಿ)
ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು,
ಬೆಳಗಾವಿ.

**ಪ್ರತಿಯನ್ನು:**

ಮಹಾ ವಿಲೇಖನಾಧಿಕಾರಿಗಳು, ಗೌರವಾನ್ವಿತ ಕರ್ನಾಟಕ ಉಚ್ಚ ನ್ಯಾಯಾಲಯ, ಬೆಂಗಳೂರು ಇವರಿಗೆ ಮುಖಪತ್ರದೊಂದಿಗೆ ಸಲ್ಲಿಸಲಾಗಿದೆ.

**ಪ್ರತಿಯನ್ನು ಮಾಹಿತಿಗಾಗಿ:**

1) ರಾಜ್ಯದ ಎಲ್ಲಾ ಜಿಲ್ಲೆಗಳ ಗೌರವಾನ್ವಿತ ಪ್ರಧಾನ ಜಿಲ್ಲಾ ಮತ್ತು ಸತ್ರ ನಾಯಾಧೀಶರುಗಳಿಗೆ, ಮಾಹಿತಿ ಮತ್ತು ತಮ್ಮ ನ್ಯಾಯಾಲಯಗಳ ಸೂಚನಾ ಫಲಕದಲ್ಲಿ ಹಾಗೂ ತಮ್ಮ ಅಧೀನ ನ್ಯಾಯಾಲಯಗಳ ಸೂಚನಾ ಫಲಕಗಳಲ್ಲಿ ಪ್ರಕಟಿಸಲು ಕೋರಿ.
2) ಬೆಳಗಾವಿ ಜಿಲ್ಲಾ ಘಟಕದ ಎಲ್ಲಾ ಅಧೀನ ನ್ಯಾಯಾಲಯಗಳ ಸೂಚನಾ ಫಲಕಗಳಲ್ಲಿ ಪ್ರಕಟಣೆಗಾಗಿ.
3) ಪ್ರಧಾನ ಕಾರ್ಯದರ್ಶಿಗಳು, ಕಾನೂನು ಇಲಾಖೆ, ಬೆಂಗಳೂರು.
4) ಜಿಲ್ಲಾಧಿಕಾರಿಯವರು, ಬೆಳಗಾವಿ.
5) ನಿರ್ದೇಶಕರು, ವಾರ್ತಾ ಮತ್ತು ಪ್ರಸಾರ ಇಲಾಖೆ, ಬೆಂಗಳೂರು ರವರಿಗೆ ಪತ್ರಿಕಾ ಪ್ರಕಟಣೆಗಾಗಿ.
6) ಉಪನಿರ್ದೇಶಕರು, ಜಿಲ್ಲಾ ಮತ್ತು ವಾರ್ತಾ ಇಲಾಖೆ, ಬೆಳಗಾವಿ ರವರಿಗೆ ಪತ್ರಿಕಾ ಪ್ರಕಟಣೆಗಾಗಿ.
7) ಸಂಕಲನಾಧಿಕಾರಿಗಳು, ಕರ್ನಾಟಕ ರಾಜ್ಯಪತ್ರ, ಸರ್ಕಾರಿ ಹೊರವಲಯ ಮುದ್ರಣಾಲಯ, ಮೈಸೂರು ರಸ್ತೆ, ಬೆಂಗಳೂರು ಇವರಿಗೆ, ಕರ್ನಾಟಕ ರಾಜ್ಯ ವಾರ್ತಾ ಪತ್ರದಲ್ಲಿ ಪ್ರಕಟಿಸುವ ಸಲುವಾಗಿ (ದ್ವಿಪ್ರತಿಯಲ್ಲಿ)
8) ಸಾಫ್ಟ್ ವೇರ್ ಟೆಕ್ನಿಷಿಯನ್, ಜಿಲ್ಲಾ ನ್ಯಾಯಾಲಯ.ಬೆಳಗಾವಿ
9) ಕಛೇರಿಯ ಸೂಚನಾ ಫಲಕಕ್ಕೆ.